MAA ಫ್ರೆಂಡ್ಸ್ ಸಾರಥ್ಯದಲ್ಲಿ...
www.yuvamarga.com Yuva Marga yuva_marga_
# ಯುವ ಮಾರ್ಗ
YUVA MARGA NEWS PAPER
VOICE OF THE NATION
ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"
ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111
YUVA MARGA KANNADA DAILY NEWS PAPER
ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111
ಸಂಪುಟ: 05 ಸಂಚಿಕೆ: 112 ಬುಧವಾರ : 18-02-2026 ರಾಯಚೂರು RNI NO: KARKAN/2022/90446 ಪುಟ: 4 ಬೆಲೆ: ರೂ: 2-00
VOLUME: 05 ISSUE: 112 WEDNESDAY : 18-02-2026 RAICHUR EMAIL: YUVAMARGA@GMAIL.COM PAGE: 4 PRICE: Rs: 2-00

## ಎಸ್.ಎಸ್.ಎಲ್.ಸಿ. ಪರೀಕ್ಷಾ ಕುರಿತು ಸಿದ್ದತೆ ಸಭೆ



ಯುವಮಾರ್ಗ ಸುದ್ದಿ

**ಮಾನ್ವಿ,ಫೆ.17–** ಪಟ್ಟಣದ ತಹಶೀಲ್ದಾರ್ ಕಚೇರಿಯ ಸಭಾಂಗಣದಲ್ಲಿ ನಡೆದ ಎಸ್.ಎಸ್.ಎಲ್.ಸಿ. ಪರೀಕ್ಷಾ ಕುರಿತು ಸಿದ್ದತೆ ಕುರಿತು ತಾಲೂಕಿನ ಸರ್ಕಾರಿ ,ಅನುದಾನಿತ, ಅನುದಾನ ರಹಿತ ವಸತಿ ಫ್ರೌಡಾಶಾಲೆಗಳ ಮುಖ್ಯಗುರುಗಳ ಸಭೆಯಲ್ಲಿ ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಮಾತನಾಡಿ ಎಸ್.ಎಸ್.ಎಲ್.ಸಿ. ಪರೀಕ್ಷೆಗಳು ಇನ್ನೂ ಕೇವಲ 30 ದಿನಗಳು ಮಾತ್ರ ಉಳಿದಿದ್ದು. ವಾರ್ಷಿಕ ಪರೀಕ್ಷೆಗಳು ವಿದ್ಯಾರ್ಥಿಗಳ ಜೀವನದಲ್ಲಿ ಮಹತ್ವವಾದ ಪಾತ್ರ ವಹಿಸುವುದರಿಂದ ಶಿಕ್ಷಕರು ಹಾಗೂ ಮುಖ್ಯಗುರುಗಳು ಹೆಚ್ಚಿನ ಕಾಳಜಿ ವಹಿಸಬೇಕು ಕಲ್ಯಾಣ ಕರ್ನಾಟಕ ಭಾಗ ಶೈಕ್ಷಣಿಕವಾಗಿ ಅತ್ಯಂತ ಹಿಂದುಳಿದಿದ್ದು ಈ ಭಾರಿ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಯ ಫಲಿತಾಂಶ ಸುದಾರಣೆಯಲ್ಲಿ ಹೆಚ್ಚಿನ ಕಾಳಜಿಯನ್ನು ವಹಿಸಬೇಕು. ಶಾಲೆಗಳಲ್ಲಿ ಕಲಿಕೆಯಲ್ಲಿ ಹಿಂದುಳಿದಿರುವ ವಿದ್ಯಾರ್ಥಿಗಳನ್ನು ಗುರುತಿಸಿ ಅವರಿಗೆ ಹೆಚ್ಚಿನ ತರಗತಿಗಳನ್ನು ತೆಗೆದುಕೊಳ್ಳಬೇಕು, ಮುಖ್ಯಗುರುಗಳು ಮನೆಮನೆಗೆ ಭೇಟಿ ನೀಡಿ ಪಾಲಕರಿಗೆ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆಯನ್ನು ನೀಡುವಂತೆ ತಿಳಿಸಬೇಕು, ವಸತಿ ಶಾಲೆಯ ಮಕ್ಕಳಿಗೆ ವಿಶೇಷ ತರಗತಿಗಳನ್ನು ತೆಗೆದುಕೊಳ್ಳುವ ಮೂಲಕ ಶೇ100 ರಷ್ಟು ಫಲಿತಾಂಶವನ್ನು ಸಾಧಿಸಬೇಕು ಹಾಜರಾತಿ ಕಡಿಮೆ ಇರುವ ಮಕ್ಕಳಿಗೆ ಪ್ರವೇಶ ಪರೀಕ್ಷೆ ಪತ್ರಗಳನ್ನು ನೀಡಬಾರದು ಎಂದು ತಿಳಿಸಿದರು.

ತಾ.ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ .ಡಿ. ಮಾತನಾಡಿ ತಾಲೂಕಿನ ಎಲ್ಲಾ ಸರ್ಕಾರಿ ಶಾಲೆಗಳಿಗೆ ವಿಷಯವಾರು ಶಿಕ್ಷಕರನ್ನು ನೀಡಲಾಗಿದೆ, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಕೃಷಿ ಚಟುವಟಿಕೆಗಳಲ್ಲಿ ಹೋಗುವುದನ್ನು ತಡೆದು ಹಾಜರಾತಿ ಹೆಚ್ಚಳಕ್ಕೆ ಮುಖ್ಯಗುರುಗಳು ಕ್ರಮ ಕೈಗೊಳ್ಳಬೇಕು ಶಿಕ್ಷಣ ಇಲಾಖೆಯಿಂದ ಎಸ್.ಎಸ್.ಎಲ್.ಸಿ ಮಕ್ಕಳಿಗಾಗಿ ಪಾಸಿಂಗ್ ಪ್ಯಾಕೆಜ್ ನೀಡಿದ್ದು (2ನೇ ಪುಟಕ್ಕೆ)

## ವಿದ್ಯಾರ್ಥಿಗಳಿಗೆ ಮುಖಚಹರೆ ಹಾಜರಾತಿ



**ಬೆಂಗಳೂರು, ಫೆ. 17–** ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಹಾಜರಾತಿಯನ್ನು ಹೆಚ್ಚಿಸಲು ಹಾಗೂ ಶಾಲೆಗಳಿಗೆ ಗೈರು ಹಾಜರಾಗುವ ವಿದ್ಯಾರ್ಥಿಗಳಿಗೆ ಬಿಸಿ ಮುಟ್ಟಿಸಲು ಶಾಲಾ ಶಿಕ್ಷಣ ಸಾಕ್ಷರತಾ ಇಲಾಖೆ ಮುಂದಾಗಿದ್ದು, ಬರುವ ಶೈಕ್ಷಣಿಕ ವರ್ಷದಿಂದ ರಾಜ್ಯದ ಎಲ್ಲ ಸರ್ಕಾರಿ ಶಾಲೆಗಳಲ್ಲಿ ಎಐ ಆಧಾರಿತ ಮುಖ ಚಹರೆ ಹಾಜರಾತಿ ವ್ಯವಸ್ಥೆಯನ್ನು ಜಾರಿ ಮಾಡಲು ನಿರ್ಧರಿಸಿದೆ.

ಈ ಬಗ್ಗೆ ಸುತ್ತೋಲೆ ಹೊರಡಿಸಿರುವ ರಾಜ್ಯದ ಶಾಲಾ ಮತ್ತು ಸಾಕ್ಷರತಾ ಇಲಾಖೆ ಎಐ ಆಧಾರಿತ ವಿದ್ಯಾರ್ಥಿಗಳ ಮುಖ ಚಹರೆ ಹಾಜರಾತಿ ವ್ಯವಸ್ಥೆಯನ್ನು ಮೊಬೈಲ್ ಅಪ್ಲಿಕೇಷನ್ ಮೂಲಕ ದಾಖಲಿಸುವ ನಿರಂತರ ಕಾರ್ಯಕ್ರಮವನ್ನು ಇ–ಆಡಳಿತ ಮೂಲಕ ಅನುಷ್ಠಾನ ಕುರಿತು ಸುತ್ತೋಲೆ ಹೊರಡಿಸಿದೆ.

ಈ ನಿರಂತರ ಕಾರ್ಯಕ್ರಮದ ಜಾರಿ ಬಗ್ಗೆ ಕಳೆದ ಬಜೆಟ್‌ನಲ್ಲಿ ಘೋಷಣೆ ಮಾಡಲಾಗಿದ್ದು, ಈ ನಿರಂತರ ಕಾರ್ಯಕ್ರಮದಡಿ ಮುಖ ಚಹರೆ ಪತ್ತೆ ಹಚ್ಚುವ ತಂತ್ರಜ್ಞಾನದ ಮೂಲಕ ಮಕ್ಕಳ ಹಾಜರಾತಿ ವ್ಯವಸ್ಥೆಯನ್ನು ಜಾರಿಗೊಳಿಸಲಾಗುವುದು ಎಂದು ಸುತ್ತೋಲೆಯಲ್ಲಿ ಹೇಳಲಾಗಿದೆ.

ವಿದ್ಯಾರ್ಥಿಗಳ ಜತೆಗೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಖಾಯಂ ಶಿಕ್ಷಕರು, ಮುಖ್ಯ ಶಿಕ್ಷಕರು, ಉಪನ್ಯಾಸಕರು ಪ್ರಾಚಾರ್ಯರು ಹಾಗೂ ಅಧಿಕಾರಿಗಳು ಎಲ್ಲ ಕಚೇರಿಗಳಲ್ಲಿರುವ ಖಾಯಂ ಬೋಧಕೇತರ ಸಿಬ್ಬಂದಿ ಅಧಿಕಾರಿಗಳ ಹಾಜರಾತಿಗೂ ಮೊಬೈಲ್ ಅಪ್ಲಿಕೇಷನ್ ಬಳಸುವ ವ್ಯವಸ್ಥೆಯನ್ನು ಜಾರಿಗೆ ತರಲಾಗುವುದು ಎಂದು ಸುತ್ತೋಲೆಯಲ್ಲಿ ಹೇಳಲಾಗಿದ್ದು, ಈ ವ್ಯವಸ್ಥೆಯಲಿಂದ ಹೇಳದೆ ಕೇಳದೆ ಶಾಲೆಗೆ ಚಕ್ಕರ್ ಹಾಕುವ ವಿದ್ಯಾರ್ಥಿಗಳ ಹಾಗೂ ಶಿಕ್ಷಕರ ಚಾಳಿಗೆಕಡಿವಾಣ ಬೀಳಲಿದೆ.

ಈ ಹೊಸ ವ್ಯವಸ್ಥೆಯಿಂದ ಶಾಲೆಗೆ ಗೈರು ಹಾಜರಾಗುವ ವಿದ್ಯಾರ್ಥಿಗಳ ಪತ್ತೆ ಸುಲಭವಾ ಗಲಿದ್ದು, ವಿದ್ಯಾರ್ಥಿಗಳ ಗೈರು ಹಾಜರಿ ಬಗ್ಗೆ ಮಾಹಿತಿಗಳು ಪೋಷಕರಿಗೆ ತಲುಪಲಿವೆ.

ಈ ಹೊಸ ವ್ಯವಸ್ಥೆ ಮುಂದಿನ ಶೈಕ್ಷಣಿಕ ವರ್ಷದಿಂದಲೇ ಜಾರಿಯಾಗಲಿದೆ. ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ ಈ ಮುಖ ಚಹರೆ ಹಾಜರಾತಿ ವ್ಯವಸ್ಥೆ ಜಾರಿಗೆ ಬರಲಿದೆ.ಕೋವಿಡ್ ಸಮಯದಲ್ಲಿ ಮಕ್ಕಳಿಗೆ ಶಾಲೆ ಹಾಜರಾ ತಿಯಲ್ಲಿ ವಿನಾಯಿತಿ ನೀಡಿತ್ತು ಶಿಕ್ಷಣ ಇಲಾಖೆ. ಇದನ್ನೇ ಅಭ್ಯಾಸ ಮಾಡಿಕೊಂಡಿದ್ದ ಕೆಲ ವಿದ್ಯಾರ್ಥಿ ಗಳು ಶಾಲೆಗೆ ಚಕ್ಕರ್ ಹೊಡೆದು ಕ್ಲಾಸ್ ಗೆ ಬರುತ್ತಿರಲಿಲ್ಲ..ಈಗ ಇಂತಹ ವಿದ್ಯಾರ್ಥಿಗಳಿಗೆ (2ನೇ ಪುಟಕ್ಕೆ>>>)

## ಕೇಂದ್ರ ತಂಡದ ಅಧಿಕಾರಿಗಳಿಂದ ನರೇಗಾ ಕಾಮಗಾರಿ ಪರಿಶೀಲನೆ

ಯುವಮಾರ್ಗ ಸುದ್ದಿ



**ರಾಯಚೂರು ಫೆ,17–** ತಾಲ್ಲೂಕಿನ ಚಂದ್ರಬಂಡಾ ಹಾಗೂ ಬಾಯಿದೊಡ್ಡಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಅನುಷ್ಠಾನಗೊಂಡ ಕಾಮಗಾರಿಗಳನ್ನು ಕೇಂದ್ರ ಆಡಿಟ್ ತಂಡದ ಅಧಿಕಾರಿ ಕುಮುದ್ ದುಬೆ ಅವರು ಫೆ.16ರ ಸೋಮವಾರ ದಂದು ಭೇಟಿ ನೀಡಿ ಪರಿಶೀಲನೆ ಮಾಡಿದರು.

ಮೊದಲಿಗೆ ಚಂದ್ರಬಂಡಾ ಗ್ರಾಮ ಪಂಚಾಯತಿ ಕಚೇರಿಗೆ ಭೇಟಿ ನೀಡಿ ಕಾಮಗಾರಿ ಕಡತ, ನೋಂದಣಿ, ಎನ್.ಎಂ.ಎಂ.ಎಸ್. ಹಾಜರಾತಿಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಪಡೆದುಕೊಂಡರು.

ನಂತರ ಅರಿಸಿಗೇರಾ ತಾಂಡದಲ್ಲಿರುವ ದನದ ಕೊಟ್ಟಿಗೆ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಿದರು.

ನಂತರ ನಾಗನದೊಡ್ಡ ಗ್ರಾಮದಲ್ಲಿರುವ ಸಾಮಾಜಿಕ ಅರಣ್ಯದಲ್ಲಿ ಕಂದಕ ಬದು ನಿರ್ಮಾಣ, ದನದ ಕೊಟ್ಟಿಗೆ ಹಾಗೂ ಚಿಂತಲ ಕುಂಟ ಅಮೃತ ಸರೋವರ ಕೆರೆ ಕಾಮಗಾರಿಗಳನ್ನು ವೀಕ್ಷಿಸಿದರು.

ನಂತರ ಚಂದ್ರಬಂಡಾ ಗ್ರಾಮದಲ್ಲಿರುವ ಕೀರಾ ಕುಂಟ ಅಮೃತ ಸರೋವರ ಕೆರೆ ಕಾಮಗಾರಿಯನ್ನು ಪರಿವೀಕ್ಷಣೆ ಮಾಡಿದರು. ನಂತರ ಬಾಯಿ ದೊಡ್ಡ ಗ್ರಾಮ ಪಂಚಾಯತಿಯ ಕಡಗಂದೊಡ್ಡಿ ಗ್ರಾಮದ ಮೆಟಲ್ ರಸ್ತೆ ನಿರ್ಮಾಣ ಕಾಮಗಾರಿಯನ್ನು ಪರಿಶೀಲಿಸಿದರು.

ನಂತರ ಕುರಬದೊಡ್ಡಿ ಗ್ರಾಮದ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕೂಲಿ ಕಾರ್ಮಿಕರ ಎನ್.ಎಂ.ಎಂ.ಎಸ್. ಹಾಜರಾತಿ, ಉದ್ಯೋಗ ಚೀಟಿ ಮತ್ತು ಕೆಲಸದ ಪ್ರಮಾಣವನ್ನು ಪರಿಶೀಲಿಸಿದರು. ನಂತರ ಚಂದ್ರಬಂಡಾ ಗ್ರಾಮ ಪಂಚಾಯತಿಯ ಕಟ್ಲಟ್ಕೂರು ಗ್ರಾಮದಲ್ಲಿ (2ನೇ ಪುಟಕ್ಕೆ>)

## 11 ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಹಿರಿಯ ಸಾಹಿತಿ ಡಾ.ಬಸವಪ್ರಭು ಪಾಟೀಲ್ ಆಯ್ಕೆ.

ಯುವಮಾರ್ಗ ಸುದ್ದಿ



**ಮಾನ್ವಿ,,ಫೆ.17–** ಮಾನ್ವಿ ತಾಲೂಕ 11ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಹಿರಿಯ ಸಾಹಿತಿ ಡಾ.ಬಸವಪ್ರಭು ಪಾಟೀಲ್ ಇವರನ್ನು ತಾಕಸಾಪ ಕಾರ್ಯಕಾರಿ ಸಮಿತಿಯಲ್ಲಿ ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ ಎಂದು ಕಸಾಪ ಅಧ್ಯಕ್ಷ ಶರಣಬಸವ ನೀರಮಾನ್ವಿ ತಿಳಿಸಿದ್ದಾರೆ.

ಫೆ.28 ರಂದು ನೀರಮಾನ್ವಿ ಗ್ರಾಮದ ಶ್ರೀಸಿದ್ಧಾರೂಢ ಮಠದ ಮೈದಾನದಲ್ಲಿ ನಡೆಯುವ 11ನೇ ಮಾನ್ವಿ ತಾಲೂಕ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಡಾ.ಬಸವಪ್ರಭು ಪಾಟೀಲ್ ಇವರನ್ನು ಆಯ್ಕೆ ಮಾಡಿರುವುದು ಸಾಹಿತ್ಯಿಕ ಬಳಗದಲ್ಲಿ ತುಂಬಾ ಹರ್ಷವನ್ನುಂಟು ಮಾಡಿದೆ ಎಂದರು.

ಫೆ.28 ರಂದು ನಡೆಯುವ 11ನೇ ತಾಲೂಕ ಕನ್ನಡ ಸಾಹಿತ್ಯ ಸಮ್ಮೇಳನವು ಕನ್ನಡ ನಾಡು ನುಡಿಯ ಜಾತ್ರೆಯಾಗಿದ್ದು ಕನ್ನಡ ಪ್ರೇಮಿಗಳು ಕನ್ನಡ ಅಭಿಮಾನಿಗಳು ಎಲ್ಲಾರು ಒಗ್ಗೂಡಿ ಸಮ್ಮೇಳನ ಯಶಸ್ಸಿಗೆ ಶ್ರಮಿಸಬೇಕಿದೆ ಎಂದು ಶರಣಬಸವ ನೀರಮಾನ್ವಿ ಮನವಿ ಮಾಡಿದ್ದಾರೆ.

## ಗೃಹ ಆರೋಗ್ಯ ಯೋಜನೆಯಡಿ ಮನೆ ಬಾಗಿಲಿಗೆ ಆರೋಗ್ಯ ಸೇವೆಗಳು




ಇತ್ತೀಚಿನ ದಿನಗಳಲ್ಲಿ ಜನರಲ್ಲಿ ವಿವಿಧ ಕಾರಣಗಳಿಂದಾಗಿ ಹೆಚ್ಚಿನ ಆರೋಗ್ಯ ಸಮಸ್ಯೆಗಳು ಹೆಚ್ಚಾಗುತ್ತಿವೆ. ಆಧುನಿಕ ಜೀವನ ಶೈಲಿ ಸೇರಿದಂತೆ ಅನೇಕ ಕಾರಣಗಳಿಂದ ಆರೋಗ್ಯ ಸಮಸ್ಯೆಗಳು ಗಂಭೀರವಾಗುತ್ತಿವೆ. ಇನ್ನು ಅನೇಕ ಆರೋಗ್ಯ ಸಮಸ್ಯೆಗಳಿಗೆ ರಕ್ತದೊತ್ತಡ ಮತ್ತು ಸಕ್ಕರೆ ಕಾಯಿಲೆ ಪ್ರಮುಖ ಕಾರಣವಾಗಿವೆ. ಆದರೆ ಹೆಚ್ಚಿನ ಜನರು ತಮಗೆ ಸಕ್ಕರೆ ಕಾಯಿಲೆ, ರಕ್ತದೊತ್ತಡ ಇದ್ದರೂ ತಪಾಸಣೆ ಮಾಡಿಸಿಕೊಳ್ಳುತ್ತಿಲ್ಲ, ಚಿಕಿತ್ಸೆ ಪಡೆದುಕೊಳ್ಳುತ್ತಿಲ್ಲ. ಇದಕ್ಕಾಗಿ ಕರ್ನಾಟಕ ಘನ ಸರಕಾರವು ಆರೋಗ್ಯ ಇಲಾಖೆಯ ಮೂಲಕ ರಾಜ್ಯದ ಜನರ ಆರೋಗ್ಯ ಕಾಪಾಡುವ ಉದ್ದೇಶದಿಂದ ಗೃಹ ಆರೋಗ್ಯ ಯೋಜನೆಯಡಿ 14 ಆರೋಗ್ಯ ಸೇವೆಗಳನ್ನು ಗ್ರಾಮೀಣ ಭಾಗದ ಜನತೆಗೆ ಒದಗಿಸಿದ ನಂತರ ಸದರಿ ಸೇವೆಗಳ ಸದುಪಯೋಗದ ಮಹತ್ವನ್ನರಿತು ನಗರ ಪ್ರದೇಶದ ಆರ್ಥಿಕ ದುರ್ಬಲ ವರ್ಗದ ಜನತೆಗೂ ಸಹ ಶೀಘ್ರದಲ್ಲಿಯೇ ಯೋಜನೆಯನ್ನು ವಿಸ್ತರಿಸಿ ಸೌಲಭ್ಯ ಒದಗಿಸಲು ಸನ್ಮಾನ್ಯ ಮುಖ್ಯಮಂತ್ರಿಗಳು ರವರ ಆದೇಶದಂತೆ ರಾಜ್ಯ ಸರ್ಕಾರವು ಅಗತ್ಯ ಸಿದ್ಧತೆ ಕೈಗೊಂಡಿದೆ.

2024ರ ಅಕ್ಟೋಬರ್ 24ರಂದು ಯೋಜನೆಗೆ ಕೋಲಾರ ಜಿಲ್ಲೆಯಲ್ಲಿ ಪ್ರಾಯೋಗಿಕವಾಗಿ ಚಾಲನೆ ನೀಡಲಾಗಿತ್ತು. ರಾಜ್ಯ ಸರ್ಕಾರವು ಸಾಂಕ್ರಾಮಿಕವಲ್ಲದ ರೋಗಗಳ ತಪಾಸಣೆಗಾಗಿ ಗೃಹ ಆರೋಗ್ಯ ಯೋಜನೆಯನ್ನು ಸರ್ಕಾರವು ನಂತರದಲ್ಲಿ ರಾಜ್ಯದಾದ್ಯಂತ ವಿಸ್ತರಿಸಿತು. ಯೋಜನೆಯ ವಿಸ್ತರಣೆಯಿಂದಾಗಿ ರಾಜ್ಯದ ಎಲ್ಲಾ ಜನರಿಗೆ ಯೋಜನೆಯ ಪ್ರಯೋಜನ ಲಭ್ಯವಾಯಿತು. ಅತಿ ಶೀಘ್ರದಲ್ಲಿ ನಗರದ ಪ್ರದೇಶದ ಆರ್ಥಿಕ ದುರ್ಬಲ ವರ್ಗದವರಿಗೂ ಮನೆ ಬಾಗಿಲಿಗೆ ಆರೋಗ್ಯ ಸೇವೆಯನ್ನು ಒದಗಿಸಲಿದೆ. ಇದು ಕೇವಲ ರೋಗ ತಪಾಸಣೆಯಷ್ಟೇ ಅಲ್ಲದೇ ರೋಗ ಪೀಡಿತರಿಗೆ ಉಚಿತ ಔಷಧಿಗಳನ್ನು ಖಚಿತಪಡಿಸುತ್ತದೆ. ಈ ಯೋಜನೆಯಿಂದ ಏನೆಲ್ಲಾ ಸೌಲಭ್ಯಗಳಿವೆ? ಎಂಬುದನ್ನು ತಿಳಿಯೋಣ ಬನ್ನಿ.. ಯೋಜನೆಯ ಉದ್ದೇಶಗಳೇನು?

ಗೃಹ ಆರೋಗ್ಯ ಯೋಜನೆಯ ಮುಖ್ಯ ಉದ್ದೇಶವೆಂದರೆ ರೋಗಗಳನ್ನು ಶೀಘ್ರವಾಗಿ ಪತ್ತೆಹಚ್ಚುವುದು. ಇದು ಅಕಾಲಿಕ ಸಾವು ಮತ್ತು ಇತರ ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟುವ ಗುರಿಯನ್ನು ಹೊಂದಿದೆ. ಮಧುಮೇಹ, ಅಧಿಕ ರಕ್ತದೊತ್ತಡ, ಸ್ತನ, ಗರ್ಭಕಂಠ ಮತ್ತು ಬಾಯಿಯ ಕ್ಯಾನ್ಸರ್ ಮುಂತಾದ ಸಾಂಕ್ರಾಮಿಕವಲ್ಲದ ಕಾಯಿಲೆಗಳನು (ಎನ್‌ಸಿಡಿ) ಹೆಚ್ಚಿನ ಚಿಕಿತ್ಸೆಗಾಗಿ ಪರೀಕ್ಷಿಸಲಾಗುತ್ತದೆ. ಈ ಯೋಜನೆಯು ಅಬ್ಸ್ಟ್ರಕ್ಟಿವ್ ಸ್ಲೀಪ್ ಅಪ್ನಿಯಾ (ಒಎಸ್‌ಎ) ಮತ್ತು ಇತರ ಮಾನಸಿಕ ಆರೋಗ್ಯ ಪರಿಸ್ಥಿತಿಗಳ ರೋಗಲಕ್ಷಣಗಳನ್ನು ಸಹ ಪರಿಶೀಲಿಸುತ್ತದೆ. ಅರ್ಹ ಪ್ರಕರಣಗಳಿಗೆ ಉಚಿತ ಔಷಧಿಗಳನ್ನು ಸಹ ಒದಗಿಸಲಾಗುವುದು.

ವರದಿಗಳ ಪ್ರಕಾರ ಒಟ್ಟು ಜನಸಂಖ್ಯೆಯ ಶೇ26.9 ರಷ್ಟು ಜನರು ಅಧಿಕ ರಕ್ತದೊತ್ತಡದಿಂದ ಬಳಲುತ್ತಿದ್ದಾರೆ. ಅಲ್ಲದೆ ಶೇ.15.6 ರಷ್ಟು ಜನರು ಮಧುಮೇಹದಿಂದ ಬಳಲುತ್ತಿದ್ದಾರೆ. ಇದೆಲ್ಲವನ್ನು ಮನಗಂಡು ಕರ್ನಾಟಕ ರಾಜ್ಯ ಸರ್ಕಾರ ಈ ಯೋಜನೆಯನ್ನು ಪ್ರಾರಂಭಿಸಿತು. ಈ ಸಂಖ್ಯೆಗಳನ್ನು ಕಡಿಮೆ ಮಾಡಲು ಮತ್ತು ಎಲ್ಲರನ್ನೂ ಆರೋಗ್ಯವಾಗಿಡಲು ಯೋಜನೆಯನ್ನು ಜಾರಿಗೊಳಿಸಲಾಗಿದೆ.

**ಗೃಹ ಆರೋಗ್ಯ ಯೋಜನೆಯ ಪ್ರಯೋಜನಗಳು ಏನು?:** ಗೃಹ ಆರೋಗ್ಯ ಯೋಜನೆಯು ಕರ್ನಾಟಕದ ಎಲ್ಲಾ ಜನರಿಗೆ ಅವರ ಮನೆ ಬಾಗಿಲಲ್ಲೇ ಆರೋಗ್ಯ ತಪಾಸಣೆಯನ್ನು ಖಚಿತಪಡಿಸುತ್ತದೆ. ಗೃಹ ಆರೋಗ್ಯ ಯೋಜನೆಯು ರೋಗಗಳನ್ನು ಮೊದಲೇ ಪತ್ತೆಹಚ್ಚುವುದನ್ನು ಖಚಿತಪಡಿಸುತ್ತದೆ ಮತ್ತು ಗಮನಾರ್ಹ ಆರೋಗ್ಯ ಸಮಸ್ಯೆಗಳು ಮತ್ತು ಅಕಾಲಿಕ ಮರಣಗಳನ್ನು ತಡೆಗಟ್ಟುತ್ತದೆ. ಅಗತ್ಯವಿರುವವರಿಗೆ ಉಚಿತ ಔಷಧಿಗಳನ್ನು ನೀಡಲಾಗುವುದು, ಚಿಕಿತ್ಸೆಯನ್ನು ಪಡೆಯಲು ಸಾಧ್ಯವಾಗದವರ ವೆಚ್ಚವನ್ನು ಸರ್ಕಾರ ಭರಿಸಲಿದ್ದು, ಈ ಯೋಜನೆ ಆರ್ಥಿಕವಾಗಿ ಹಿಂದುಳಿದವರಿಗೆ ವರದಾನವಾಗಿದೆ. ರೋಗಗಳು ಪತ್ತೆಯಾದ ನಂತರ, ಜನರು ವಿಶೇಷ ಚಿಕಿತ್ಸೆಗಾಗಿ ಹತ್ತಿರದ ಆರೋಗ್ಯ ಕೇಂದ್ರಗಳಿಗೆ ಕಳುಹಿಸಿಕೊಡಲಾಗುವುದು.

**ಗೃಹ ಆರೋಗ್ಯ ಯೋಜನೆಯ ಪ್ರಮುಖ ಅಂಶಗಳು:** ಗೃಹ ಆರೋಗ್ಯ ಯೋಜನೆ, ಕರ್ನಾಟಕದ ಅತಿದೊಡ್ಡ ಆರೋಗ್ಯ ರಕ್ಷಣಾ ಉಪಕ್ರಮಗಳಲ್ಲಿ ಒಂದಾಗಿದ್ದು, ತನ್ನ ಎಲ್ಲಾ ನಾಗರಿಕರನ್ನು ಒಳಗೊಳ್ಳುತ್ತದೆ. ಕರ್ನಾಟಕ ರಾಜ್ಯ ಸರ್ಕಾರವು 15ನೇಯ ಹಣಕಾಸು ಯೋಜನೆಯಡಿ ಅನುಷ್ಠಾನ ಮಾಡುತ್ತಿದ್ದು, ಯೋಜನೆಯಡಿ ಆರಂಭದಲ್ಲಿ ಜಿಲ್ಲೆಯ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಾದ ರಾಯಚೂರು, ಸಿಂಧನೂರು ನಗರ ವ್ಯಾಪ್ತಿಯ ಸುಮಾರು 1,04,342 ಜನರ ತಪಾಸಣೆ ಕೈಗೊಂಡು, ಅವರಲ್ಲಿ ಮೂವತ್ತು ವರ್ಷಕ್ಕಿಂತ ಮೇಲ್ಪಟ್ಟ ಸುಮಾರು 41,757 ಜನರಿಗೆ ಸೇವೆ ಒದಗಿಸುವ ಗುರಿಯನ್ನು ಹೊಂದಿದೆ. ಇದಕ್ಕಾಗಿ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳು ಮತ್ತು ಆಶಾ ಕಾರ್ಯಕರ್ತೆರು ಪ್ರತಿದಿನ ಮನೆಗೆ ಭೇಟಿ ನೀಡಿ ನಿಗದಿತ ನಮೂನೆಯ ಪ್ರಶ್ನಾವಳಿಗಳ ಮೂಲಕ ರೋಗ ಸಮಸ್ಯೆ ಪತ್ತೆ ಹಚ್ಚಲು ಸಮಾಲೋಚನೆ ನಡೆಸಲಿದ್ದಾರೆ. ತದ ನಂತರ ಉಚಿತ ಆರೋಗ್ಯ ತಪಾಸಣೆ ಕೈಗೊಂಡು ಚಿಕಿತ್ಸೆಯ ಭಾಗವಾಗಿ ಉಚಿತ ಔಷಧಿಗಳನ್ನು ಸಹ ನೀಡಲಾಗುವುದು.

**ಹೆಚ್ಚಿನ ಚಿಕಿತ್ಸೆ:** ಆರೋಗ್ಯ ತಪಾಸಣೆಯ ಬಳಿಕ ರೋಗಿಗೆ ಚಿಕಿತ್ಸೆಯ ಅಗತ್ಯವಿದ್ದರೆ ಔಷಧಿ ವಿತರಣೆ ಮಾಡಲಾಗುವುದು, ಅಗತ್ಯವಿರುವ ರೋಗಿಗಳನ್ನು ಆಸ್ಪತ್ರೆಗೆ ದಾಖಲಿಸಲಾಗುವುದು. ಹಿರಿಯ ನಾಗರಿಕರು, ಅಂಗವಿಕಲ ವ್ಯಕ್ತಿಗಳು ಮತ್ತು ಹೊರರೋಗಿಗಳ ಆರೈಕೆಯ ಅಗತ್ಯವಿರುವ ರೋಗಿಗಳಿಗೆ ವಿಶೇಷ ಸೌಲಭ್ಯಗಳನ್ನು ನೀಡಲಾಗಿದೆ. ಅಧಿಕ ರಕ್ತದೊತ್ತಡ ಮತ್ತು ಮಧುಮೇಹ ಹೊಂದಿರುವ ರೋಗಿಗಳನ್ನು ಹತ್ತಿರದ ಆರೋಗ್ಯ ಕೇಂದ್ರಗಳಿಗೆ ಕಳುಹಸಿ ಚಿಕಿತ್ಸೆ ಒದಗಿಸಲಾಗುತ್ತದೆ.

ಒಟ್ಟಾರೆಯಾಗಿ ಕರ್ನಾಟಕ ಸರಕಾರವು ನಿಮ್ಮ ಅರೋಗ್ಯ–ನಮ್ಮ ಆಧ್ಯತೆ ಎಂಬ ಧ್ಯೆಯದಂತೆ ಸಮುಯುದಾಯುದ ಕಟ್ಟಕಡೆಯು ವ್ಯಕ್ತಿಗೂ ಗುಣಮಟ್ಟದ ಅರೋಗ್ಯ ಸೇವೆಗಳನ್ನು ನೀಡುವ ಜೊತೆಗೆ ಕುಟುಂಬವು ನೆಮ್ಮದಿಯ ಜೀವನ ಸಾಗಿಸಲು ದೃಡ ಹೆಜ್ಜೆಗಳನ್ನು ಇಟ್ಟಿದೆ.

**– ಡಾ.ಸುರೇಂದ್ರ ಬಾಬು**

**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ರಾಯಚೂರು.**

**– ಡಾ.ಚಂದ್ರಶೇಖರಯ್ಯ ಸ್ವಾಮಿ**

**ಆರೋಗ್ಯ ಇಲಾಖೆಯ ಜಿಲ್ಲಾ ಯೋಜನಾ ಅಭಿವೃದ್ಧಿ ಅಧಿಕಾರಿಗಳು, ರಾಯಚೂರು.**

## ಮೊದಲನೇಯ ಪುಟದಿಂದ

# ಎಸ್.ಎಸ್.ಎಲ್.ಸಿ. ಪರೀಕ್ಷಾ ಕುರಿತು ಸಿದ್ದತೆ ಸಭೆ

ಪ್ರತಿ ವಿಷಯದಲ್ಲಿ 15 ಅಂಕಗಳನ್ನು ಪಡೆದರು ಕೂಡ ಉತ್ತೀರ್ಣಗಾರಗುವುದಕ್ಕೆ ಸಾಧ್ಯವಿದೆ ಹಾಗೂ ಪರೀಕ್ಷೆಗಾಗಿ 4 ಮಾದರಿ ಪ್ರಶ್ನೆ ಪತ್ರಿಕೆಗಳನ್ನು ನೀಡಿದ್ದು ಅವುಗಳನ್ನು ಸರಿಯಾಗಿ ಅಭ್ಯಾಸ ಮಾಡಿದರು ಕೂಡ ಕನಿಷ್ಟ 60 ಅಂಕಗಳನ್ನು ಪಡೆಯಬಹುದು.ತಾಲೂಕಿನ 18 ಪರೀಕ್ಷೆ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿದ್ದು ಕೇಂದ್ರಗಳಲ್ಲಿ ಸಿ.ಸಿ. ಕ್ಯಾಮರ ಹಾಗೂ ವೆಬ್ ಕ್ಯಾಮರ, ಕುಳಿತು ಕೊಳ್ಳುವ ಆಸನ ವ್ಯವಸ್ಥೆಯನ್ನು ಮಾಡಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಕುಬೇರಪ್ಪ, ತಾ. ಎಸ್.ಎಸ್.ಎಲ್.ಸಿ. ಪರೀಕ್ಷೆ ನೋಡಲ್ ಅಧಿಕಾರಿ ಹನುಮೇಶ ಸೇರಿದಂತೆ ಮಾನ್ವಿ ಮತ್ತು ಸಿರವಾರ ತಾಲೂಕಿನ ಸರ್ಕಾರಿ ,ಅನುದಾನಿತ, ಅನುದಾನ ರಹಿತ ವಸತಿ ಫ್ರೌಡಾಶಾಲೆಗಳ ಮುಖ್ಯಗುರುಗಳು ಭಾಗವಹಿಸಿದರು.

# ಕೇಂದ್ರ ತಂಡದ ಅಧಿಕಾರಿಗಳಿಂದ ನರೇಗಾ ಕಾಮಗಾರಿ ಪರಿಶೀಲನೆ

ಚರಂಡಿ ನಿರ್ಮಾಣ ಕಾಮಗಾರಿಯನ್ನು ವೀಕ್ಷಿಸಿದರು. ಇದೇ ಸಂದರ್ಭದಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ಸಹಾಯಕ ನಿರ್ದೇಶಕರು ಹನುಮಂತ, ಪಂಚಾಯತ ಅಭಿವೃದ್ಧಿ ಅಧಿಕಾರಿ, ಡಿಪಿಎಮ್, ತಾಂತ್ರಿಕ ಸಂಯೋಜಕರು, ತಾಂತ್ರಿಕ ಸಹಾಯಕರು, ಐಇಸಿ ಸಂಯೋಜಕರು ಸೇರಿದಂತೆ ಗ್ರಾಮ ಪಂಚಾಯತ್ ಸಿಬ್ಬಂದಿಗಳು ಇದ್ದರು.

# ವಿದ್ಯಾರ್ಥಿಗಳಿಗೆ ಮುಖಚಹರೆ ಹಾಜರಾತಿ

ಶಿಕ್ಷಣ ಇಲಾಖೆ ಮಕ್ಕಳ ಹಾಜರಾತಿ ಗೆ ಎಐ ತಂತ್ರಜ್ಞಾನದ ಮೂಲಕ ಫೇಸಿಯಲ್ ಅಟೆಂಡೆನ್ಸ್ ಜಾರಿಗೆ ತರಲು ಮುಂದಾಗಿದೆ. ಮುಂದಿನ ಶೈಕ್ಷಣಿಕ ವರ್ಷದಿಂದ ರಾಜ್ಯದ ಎಲ್ಲಾ ಶಾಲೆಗಳಲ್ಲಿ ಮಕ್ಕಳ ಹಾಜರಾತಿಯನ್ನು ಮೊಬೈಲ್ ತಂತ್ರಜ್ಞಾನದ ಮೂಲಕ ಫೋಟೋ ತೆಗೆದು ಹಾಜರಾತಿಯನ್ನು ಖಚಿತ ಪಡಿಸಿ.ನೇರವಾಗಿ ಇಲಾಖೆಯ ಸ್ಟೇಟ್ಸ್ ಗೆ ಹಾಗೂ ಪೋಷಕರ ಮೊಬೈಲ್‌ಗೆ ಅಪ್ ಡೇಟ್ ಅಗುತ್ತೆ..

ಈ ಮೂಲಕ ನಿತ್ಯ ಶಾಲೆಯಲ್ಲಿ ಎಷ್ಟು ಮಕ್ಕಳು ಹಾಜರಿದ್ದರು ಎಂಬ ಮಾಹಿತಿ ಶಿಕ್ಷಣ ಇಲಾಖೆಗೆ ಮಾಹಿತಿ ಸಿಗಲಿದೆ ..ಇತ್ತ ಪೋಷಕರ ಮೊಬೈಲ್ ಗೂ ಕೂಡ ಮಕ್ಕಳ ಹಾಜರಾತಿ ಮೇಸೆಜ್ ಮೂಲಕ ಮಾಹಿತಿ ಲಭ್ಯವಾಗುತ್ತದೆ.. ಇನ್ನೂ ಕಡ್ಡಾಯ ಹಾಜರಾತಿ ಯಿಂದ ಕಡಿಮೆ ಹಾಜರಾತಿ ಇರುವ ಮಕ್ಕಳಿಗೆ ಪರೀಕ್ಷೆ ವಿನಾಯಿತಿ ಬಗ್ಗೆಯೂ ಚಿಂತನೆ ನಡೆಸಿದೆ ಶಿಕ್ಷಣ ಇಲಾಖೆ..

ಇನ್ನೂ 2026-27 ನೇ ಶೈಕ್ಷಣಿಕ ಸಾಲಿನಲ್ಲಿ ಮುಖ ಗುರುತು ತಂತ್ರಜ್ಞಾನದ ಮೂಲಕ ಅನುದಾನಿತ ಹಾಗೂ ಸರ್ಕಾರಿ ಶಾಲೆಗಳಲ್ಲಿ ಈ ಯೋಜನೆ ಜಾರಿಯಾಗುತ್ತೆ. ಒಟ್ಟು 2.16 ಕೋಟಿ ವೆಚ್ಚದಲ್ಲಿ ಈ ಯೋಜನೆ ರಾಜ್ಯದ ಎಲ್ಲಾ ಶಾಲೆಗಳಲ್ಲಿ ಅಳವಡಿಕೆ ಮಾಡಲು ಸರ್ಕಾರ ಮುಂದಾಗಿದು. ಸ್ಥಳೀಯ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಿ .ಇದೆ ಮೇ ತಿಂಗಳ ಅಂತ್ಯದೋಳಗೆ ಎಐ ಮೊಬೈಲ್ ಹಾಜರಾತಿ ಆಪ್ ಅನುಷ್ಠಾನಕ್ಕೆ ಸೂಚಿಸಿದೆ. ಇನ್ನೂ ಶಾಲಾ ಮಕ್ಕಳಿಗೆ ಅಲ್ಲದೆ ಶಿಕ್ಷಕರಿಗೂ ಈ ಫೇಸಿಯಲ್ ಎಐ ತಂತ್ರಜ್ಞಾನದ ಮೂಲಕ ಹಾಜರಾತಿ ಕಡ್ಡಾಯ ಮಾಡಿದು.ಕಳ್ಳಾಟ ಆಡುವ ಶಿಕ್ಷಕರಿಗೂ ಈ ಯೋಜನೆ ವಿಸ್ತರಣೆ ಮಾಡಿ. ಮಕ್ಕಳಂತೆ ಶಿಕ್ಷಕರು ಕೂಡ ಫೇಸಿಯಲ್ ಅಟೆಂಡೆನ್ಸ್ ಪಾಲಿಸಬೇಕು ಅಂತು ಶಿಕ್ಷಣ ಇಲಾಖೆ ಸೂಚಿಸಿದೆ..

# ಕ್ಷೇತ್ರದ ಜನರ ಋಣ ನಾವು ಎಂದಿಗೂ ಮರೆಯಲು ಸಾಧ್ಯವಿಲ್ಲ: ಚಿದಾನಂದ ಸವದಿ



**ಅಥಣಿ :ಫೆ.17–** ತಾಲೂಕಿನ ಜನತೆ ಒಬ್ಬ ರೈತನ ಮಗನನ್ನು ನಾಲ್ಕು ಬಾರಿ ಶಾಸಕನ್ನಾಗಿ ಮಾಡಿ, ಉಪ ಮುಖ್ಯಮಂತ್ರಿ ಸ್ಥಾನದವರೆಗೆ ಬೆಳೆಸಿದ್ದೀರಿ. ನಿಮ್ಮ ಈ ಋಣವನ್ನು ನಾವು ಎಂದಿಗೂ ಮರೆಯಲು ಸಾಧ್ಯವಿಲ್ಲ. ಅಭಿವೃದ್ಧಿ ಕೆಲಸಗಳ ಮೂಲಕ ಆ ಋಣವನ್ನು ತೀರಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ ಎಂದು ಯುವ ನಾಯಕ ಚಿದಾನಂದ ಸವದಿ ಹೇಳಿದರು.

ಅವರು ಸೋಮವಾರ ಇಲ್ಲಿನ ಸಾರ್ವಜನಿಕ ಆಸ್ಪತ್ರೆಯ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಅಂದತ್ವ ನಿಯಂತ್ರಣ ವಿಭಾಗ, ತಾಲೂಕ ಆರೋಗ್ಯ ಇಲಾಖೆ. ಲಕ್ಷ್ಮಣ ಸವದಿ ಫೌಂಡೇಶನ್ ಹಾಗೂ ಟಿಕೆ ಅಯ್ ಕ್ಲಿನಿಕ್ , ಸಾಂಗಲಿ ಇವರ ಆಶ್ರಯದಲ್ಲಿ ಶಾಸಕ ಲಕ್ಷ್ಮಣ ಸವದಿ ಅವರ 66ನೇ ಹುಟ್ಟುಹಬ್ಬದ ನಿಮಿತ್ಯ ಹಮ್ಮಿಕೊಳ್ಳಲಾಗಿದ್ದ ಉಚಿತ ಕಣ್ಣಿನ ತಪಾಸಣಾ ಶಿಬಿರವನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದರು. ನಮ್ಮ ದೇಹದ ಸೂಕ್ಷ್ಮ ಅಂಗವಾಗಿರುವ ಕಣ್ಣಿನ ಆರೋಗ್ಯ ಕಾಪಾಡಲು ಮತ್ತು ದೃಷ್ಟಿ ಸಮಸ್ಯೆ ಆರಂಭಿಕ ಹಂತದಲ್ಲಿ ಪತ್ತೆ ಹಚ್ಚಿ, ಅಮೂಲ್ಯವಾದ ಕಣ್ಣುಗಳ ರಕ್ಷಣೆ ಬಗ್ಗೆಯೂ ಸದಾ ಎಚ್ಚರ ವಹಿಸಬೇಕು. ಕಣ್ಣಿನ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ತೋರಿದ್ದೆ ಆದಲ್ಲಿ ಬದುಕೆಲ್ಲಾ ಅಂಧಾಕಾರದಲ್ಲಿ ಕಳೆಯುವ ಅಪಾಯವಿದ್ದು, ಈ ಬಗ್ಗೆ ನಾವೆಲ್ಲರೂ ಜಾಗೃತಿ ವಹಿಸಬೇಕು ಎಂದರು.

ಅಥಣಿ ಸಾರ್ವಜನಿಕ ಆಸ್ಪತ್ರೆಯು ರಾಜ್ಯದ ಅತ್ಯುತ್ತಮ 10 ಆಸ್ಪತ್ರೆಗಳಲ್ಲಿ ಒಂದಾಗಿರುವುದು ನಮ್ಮೆಲ್ಲರಿಗೆ ಹೆಮ್ಮೆ. ಇಲ್ಲಿ ಶಾಸಕರ ಪ್ರಯತ್ನದಿಂದ ಜನರಿಗೆ ಉತ್ತಮ ಆರೋಗ್ಯ ಸೇವೆಗಳನ್ನು ಇಲ್ಲಿನ ತಜ್ಞ ವೈದ್ಯರು ಮತ್ತು ಸಿಬ್ಬಂದಿ ಒದಗಿಸುತ್ತಿದ್ದಾರೆ. ಇದರ ಜೊತೆಗೆ ನನ್ನ ಹಾಗೂ ನಮ್ಮ ತಂದೆಯವರ ಹುಟ್ಟು ಹಬ್ಬದ ನಿಮಿತ್ಯ ಟಿಕೆ ನೇತ್ರ ಚಿಕಿತ್ಸಾ ಆಸ್ಪತ್ರೆಯ ಸಹಕಾರದಿಂದ ಅನೇಕ ಉಚಿತ ಶಿಬಿರಗಳನ್ನು ನಡೆಸುವ ಮೂಲಕ ಸಾವಿರಾರು ಜನರ ಅಂದತ್ವ ಸಮಸ್ಯೆಯನ್ನ ನಿವಾರಿಸಲಾಗಿದ್ದು, ಈ ಸಾಮಾಜಿಕ ಸೇವೆ ನಮಗೆ ಬಹಳಷ್ಟು ಖುಷಿ ತಂದಿದೆ. ಇಂತಹ ಆರೋಗ್ಯ ಸೇವೆಗಳಿಗೆ ಸವದಿ ಪರಿವಾರದಿಂದ ಯಾವತ್ತೂ ಸಹಕಾರ ಇರುತ್ತದೆ ಎಂದು ಹೇಳಿದರು.

ಪ್ರಾಸ್ತಾವಿಕವಾಗಿ ತಾಲೂಕಾ ವೈದ್ಯಾಧಿಕಾರಿ ಡಾ.ಬಸಗೌಡ ಕಾಗೆ ಮಾತನಾಡಿ ಅಥಣಿ ಮತ ಕ್ಷೇತ್ರದ ಶಾಸಕರಾಗಿರುವ ಲಕ್ಷ್ಮಣ ಸವದಿ ಅವರು ತಾಲೂಕಿನ ಬಡ ಜನತೆಗೆ ಉಚಿತ ಹಾಗೂ ಉತ್ತಮ ಆರೋಗ್ಯ ಸೇವೆಗಳು ದೊರಕಬೇಕು ಎಂಬ ಉದ್ದೇಶದಿಂದ ಅನೇಕ ಸೌಲಭ್ಯಗಳನ್ನ ಒದಗಿಸಿದ್ದಾರೆ. ಸು. 27 ಕೋಟಿ ರೂಪಾಯಿ ವೆಚ್ಚದಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ನಿರ್ಮಾಣ ಕಾರ್ಯ ಪ್ರಗತಿ ಹಂತದಲ್ಲಿದ್ದು, ಇದರಿಂದ ತಾಲೂಕಿನ ಜನತೆಗೆ ಬಹಳಷ್ಟು ಅನುಕೂಲವಾಗಲಿದೆ. ಆಸ್ಪತ್ರೆಗೆ ಬರುವ ರೋಗಿಗಳಿಗೆ ಅನುಕೂಲವಾಗಲು ನೆರಳಿಗಾಗಿ ಶಾಸಕರ ನಿಧಿಯಿಂದ 10 ಲಕ್ಷ ರೂ. ವೆಚ್ಚದಲ್ಲಿ ಸುಸಜ್ಜಿತ ಶೆಡ್ ನಿರ್ಮಿಸಲಾಗುತ್ತಿದೆ, ಎಂದ ಅವರು ಶಾಸಕರ ಹುಟ್ಟು ಹಬ್ಬದ ನಿಮಿತ್ಯ ಅನೇಕ ವರ್ಷಗಳಿಂದ ನೇತ್ರ ಚಿಕಿತ್ಸಾ ಶಿಬಿರಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಇದರಿಂದ ಸಾವಿರಾರು ಜನರಿಗೆ ಶಸ್ತ್ರಚಿಕಿತ್ಸೆ ಮೂಲಕ ಅಂದತ್ವ ನಿವಾರಣೆ ಮಾಡಲಾಗಿದೆ. ಶಾಸಕರ ಈ ಜನಪರ ಕಾಳಜಿಯನ್ನು ಪ್ರಶಂಶಿಸಿದ ಅವರು ಅವರ ಅನುಪಸ್ಥಿತಿಯಲ್ಲಿ ಅವರಿಗೆ ಹುಟ್ಟು ಹಬ್ಬದ ಶುಭಾಶಯಗಳು ಕೋರಿದರು.

ನಂತರ 300ಕ್ಕೂ ಅಧಿಕ ಅಂಧತ್ವ ಸಮಸ್ಯೆ ಇರುವ ಜನರಿಗೆ ಚಿಕಿತ್ಸೆ ನೀಡಲಾಯಿತು. 250 ಜನರಿಗೆ ಮೋತಿಬಿಂದು ಶಸ್ತ್ರಚಿಕಿತ್ಸೆಗಾಗಿ ಸಾಂಗಲಿ ಆಸ್ಪತ್ರೆಗೆ ಕಳುಹಿಸಲಾಯಿತು.

ಶಿಬಿರಾರ್ಥಿಗಳಿಗೆ ಊಟದ ವ್ಯವಸ್ಥೆ ಮಾಡಿದ್ದ ಶಾಸಕ ಲಕ್ಷ್ಮಣ ಸವದಿ ಅವರ ಅಪ್ಪಟ ಅಭಿಮಾನಿ ಮಲ್ಲು ಕುಳ್ಳೋಳಿ ಹಾಗೂ ಮಿಲಿಂದ ಸಲಗರ ಅವರನ್ನು ಲಕ್ಷ್ಮಣ ಸವದಿ ಫೌಂಡೇಶನ್ ವತಿಯಿಂದ ಸತ್ಕರಿಸಿ ಗೌರವಿಸಲಾಯಿತು

ಈ ಸಂದರ್ಭದಲ್ಲಿ ಯುವ ಮುಖಂಡ ಬೀರಪ್ಪ ಯಕ್ಕಂಚಿ, ಟಿಕೆ ನೇತ್ರ ಚಿಕಿತ್ಸಾಲಯದ ಡಾ. ಆಕಾಶ ಎಂ. ಹಾಗೂ ಅಥಣಿ ಸಾರ್ವಜನಿಕ ಆಸ್ಪತ್ರೆಯ ನೇತ್ರ ತಜ್ಞ ಡಾ. ರಮೇಶ ಹುಲಕುಂದ, ಡಾ. ಎಸ್ ಬಿ ಕಲಮಡಿ. ಸಮಾಜ ಸೇವಕ ಮಲ್ಲು ಕುಲ್ಲೋಳ್ಳಿ, ಮಿಲಿಂದ್ ಸಲಗರ, ಮಹಾಂತೇಶ್ ಠಕ್ಕಣ್ಣವರ, ಪ್ರಕಾಶ್ ನರಟ್ಟಿ, ರಮೇಶ್ ಸಜ್ಜನ, ನವೀನ್ ಕತ್ರಾಳ. ಮಂಜು ನೂಲಿ. ಮಹಾಂತೇಶ ಬಾಡಗಿ. ಸುರೇಶ ವಾಲಿಕರ. ಮುತ್ತು ಮೋಕಾಶಿ, ಮಹಾಂತೇಶ ಕಾಂಬಳೆ, ಅಲ್ತಾಫ್ ಗಡ್ಡೇಕರ, ಶಂಭು ತೇರದಾರ, ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಆಳಂದ: ಶಾಂತಿಯುತವಾಗಿ ಶಿವಲಿಂಗ ಪೂಜೆ



**ಆಳಂದ,ಫೆ.17–**ಪಟ್ಟಣದಲ್ಲಿನ ಸೂಫಿ ಸಂತ ಲಾಡ್ಲೆಮಶಾಕ್ ದರ್ಗಾ ಆವರಣದಲ್ಲಿರುವ ರಾಘವ ಚೈತನ್ಯರ ಸಮಾಧಿಯ ಶಿವಲಿಂಗ ಪೂಜೆಯ ಭಾನುವಾರ ಶಾಂತಿಯುತವಾಗಿ ನಡೆಯಿತು.

ಯಾವುದೇ ಅಹಿತಕರ ಘಟನೆ ನಡೆಯದಂತೆ ತಡೆಯಲು ಜಿಲ್ಲಾ ಪೊಲೀಸ್ ಇಲಾಖೆ ಹಾಗೂ ತಾಲೂಕು ಆಡಳಿತವು ಕಟ್ಟುನಿಟ್ಟಿನ ಭದ್ರತಾ ಕ್ರಮಗಳನ್ನು ಕೈಗೊಂಡಿತ್ತು. ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಅವರ ನೇತೃತ್ವದಲ್ಲಿ ಹೆಚ್ಚುವರಿ ಎಸ್‌ಪಿ, ಡಿವೈಎಸ್‌ಪಿ, ವಿವಿಧ ವಲಯಗಳ ಪಿಎಸ್‌ಐಗಳು ಸೇರಿದಂತೆ ನೂರಾರು ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಿ, ಪಟ್ಟಣದ ನಾಲ್ಕು ದಿಕ್ಕುಗಳಲ್ಲಿ ಬ್ಯಾರಿಕೇಡ್ ಹಾಕಿ ಭಾರೀ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿತ್ತು.

ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ನಿರಂತರ ಪೊಲೀಸ್ ಗಸ್ತು ನಡೆಯುತ್ತಿದ್ದರೆ, ಕಲಬುರಗಿ ಹೆದ್ದಾರಿಯಿಂದ ಆಳಂದ ಪಟ್ಟಣದ ಪ್ರವೇಶ ಮಾರ್ಗದವರೆಗೆ ಸುಮಾರು ನಾಲ್ಕು ಕಿ.ಮೀ ಅಂತರದಲ್ಲಿ ಪೊಲೀಸ್ ನಾಕಾಬಂದಿ ವಿಧಿಸಲಾಗಿತ್ತು. ಶಂಕಾಸ್ಪದ ವಾಹನಗಳು ಹಾಗೂ ವ್ಯಕ್ತಿಗಳ ಪರಿಶೀಲನೆ ನಡೆಸಿ, ಪಟ್ಟಣಕ್ಕೆ ಅನಗತ್ಯ ಪ್ರವೇಶ ತಡೆಯುವ ಮೂಲಕ ಶಾಂತಿ ಕಾಪಾಡಲು ಕ್ರಮ ವಹಿಸಲಾಯಿತು. 163 ಕಲಂ ನಿಷೇಧಾಜ್ಞೆ ಜಾರಿಯಲ್ಲಿದ್ದ ಕಾರಣ, ಜನಸಂದಣಿ ಸೇರುವುದನ್ನು ನಿಬರ್ಂಧಿಸಲಾಗಿತ್ತು.

ಕಟ್ಟುನಿಟ್ಟಿನ ಪೊಲೀಸ್ ಸರ್ಪಗಾವಲು ಹಾಗೂ ತಾಲೂಕು ಆಡಳಿತದ ನಿಗಾದ ನಡುವೆ ರಾಘವ ಚೈತನ್ಯರ ಸಮಾಧಿಯಲ್ಲಿ ಶಿವಲಿಂಗ ಪೂಜೆ ಸಂಪೂರ್ಣ ಶಾಂತಿಯುತವಾಗಿ ನೆರವೇರಿತು. ಯಾವುದೇ ಗೊಂದಲ ಅಥವಾ ಅಹಿತಕರ ಘಟನೆಗಳು ಸಂಭವಿಸದೆ, ಪೂಜೆ ಕಾರ್ಯಕ್ರಮ ಸುವ್ಯವಸ್ಥಿತವಾಗಿ ಮುಕ್ತಾಯವಾಯಿತು.

ಬೆಳಗಿನ ಜಾವಕ್ಕೆ ಕೆಲವಷ್ಟು ಮುಕ್ತ ವಾತಾವರಣ ಕಂಡುಬಂದರೂ, ಹೊತ್ತು ಹೆಚ್ಚಾದಂತೆ 163 ಕಲಂ ಪರಿಣಾಮವಾಗಿ ಪಟ್ಟಣದಲ್ಲಿ ವ್ಯಾಪಾರ ವಹಿವಾಟು ಸಂಪೂರ್ಣವಾಗಿ ಸ್ಥಗಿತಗೊಂಡಿತು. ಅಂಗಡಿ, ಹೋಟೆಲ್ ಸೇರಿದಂತೆ ಎಲ್ಲ ವಾಣಿಜ್ಯ ಚಟುವಟಿಕೆಗಳು ಮೊಟಕುಗೊಂಡು, ಜನಸಾಮಾನ್ಯರು ಅಗತ್ಯ ವಸ್ತುಗಳ ಖರೀದಿಗೂ ಅಸೌಕರ್ಯ ಅನುಭವಿಸಿದರು. ರಸ್ತೆಗಳಲ್ಲಿ ಸಂಚಾರ ವಿರಳವಾಗಿದ್ದು, ಪಟ್ಟಣ ಸನ್ನಿವೇಶ ಮೌನಾವೃತಗೊಂಡಿತ್ತು.

ಭದ್ರತಾ ದೃಷ್ಟಿಯಿಂದ ಕೈಗೊಳ್ಳಲಾದ ಕ್ರಮಗಳು ಶಾಂತಿ ಕಾಪಾಡಲು ಸಹಕಾರಿಯಾಗಿದ್ದರೂ, ವ್ಯಾಪಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ತೀವ್ರ ತೊಂದರೆ ಉಂಟಾಗಿರುವ ಬಗ್ಗೆ ಸ್ಥಳೀಯರು ಅಸಮಾಧಾನ ವ್ಯಕ್ತಪಡಿಸಿದರು.

ಮುಂದಿನ ದಿನಗಳಲ್ಲಿ ನ್ಯಾಯಾಲಯದ ಆದೇಶದಂತೆ ಶಾಶ್ವತ ಪರಿಹಾರ ಕಂಡುಹಿಡಿದು, ಇಂತಹ ಕಟ್ಟುನಿಟ್ಟಿನ ಬಂದೋಬಸ್ತ್ ಅವಶ್ಯಕತೆ ಇಲ್ಲದಂತೆ ಕ್ರಮ ವಹಿಸಬೇಕೆಂಬ ಒತ್ತಾಯವೂ ಕೇಳಿಬಂದಿತು.

ಕೋರ್ಟ ಆದೇಶದಂತೆ ಪೂಜೆ ತೆರಳಿ ನೆರವೇರಿಸಿದ ಜಿಪಂ ಮಾಜಿ ಸದಸ್ಯ ಹರ್ಷಾನಂದ ಗುತ್ತೇದಾರ, ಸಿದ್ರಾಮಯ್ಯ ಹಿರೇಮಠ, ಬಿಜೆಪಿ ಜಿಲ್ಲಾಧ್ಯಕ್ಷ ಅಶೋಕ ಬಗಲಿ, ಶಿವಪುತ್ರಪ್ಪ ನಡಗೇರಿ, ಗುರುಶಾಂತ ಟೆಂಗಳಿ, ಬಿಜೆಪಿ ಅಧ್ಯಕ್ಷ ಮಲ್ಲಿಕಾರ್ಜುನ ಕಂದಗುಳೆ, ರಾಕೇಶ ಜಮಾದಾರ, ರವಿ ಮದನಕರ್, ಹಣಮಂತರಾವ್ ಪಾಟೀಲ, ಮಲ್ಕಪ್ಪ ಹಿರೇಪೂಜಾರಿ, ಶ್ರೀರಾಮ ಸೇನೆಯ ಈರಣ್ಣಾ ಹತ್ತರಕಿ, ಬಂಜಾರಾ ಕ್ರಾಂತಿದಳ ಅಧ್ಯಕ್ಷರಾಗಿರುವ ರಾಜು ಜೆ. ಚವ್ಹಾಣ ಸೇರಿ 14ಮಂದಿ ಶ್ರೀ ರಾಘವಚೈತನ್ಯ ಶಿವಲಿಂಗಕ್ಕೆ ರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ ಪೂಜೆ ನೆರವೇರಿಸಿದರು.

ಮುಖಂಡರ ಪ್ರತಿಕ್ರಿಯೆ:

ಬಳಿಕ ಪ್ರತಿಕ್ರಿಯೆ ವ್ಯಕ್ತಪಡಿಸಿದ ಹರ್ಷಾನಂದ ಗುತ್ತೇದಾರ ಅವರು, ರಾಘವ ಚೈತನ್ಯ ಶಿವಲಿಂಗದ ಪೂಜೆಗೆ ಜಿಲ್ಲಾಡಳಿತ ಮತ್ತು ಕಾಂಗ್ರೆಸ್ ಸರ್ಕಾರ ಅವಕಾಶ ನೀಡದೆ ಹಿಂದುಗಳ ಭಾವನೆಗೆ ಧಕ್ಕೆಯನ್ನುಂಟು ಮಾಡಿ ಅವಮಾನಿಸುತ್ತಿದೆ. ಆದರೆ ನ್ಯಾಯಾಲಯವು ನಮ್ಮ ಹಕ್ಕುಗಳನ್ನು ಎತ್ತಿಹಿಡಿದು ಪೂಜೆಗೆ ಅವಕಾಶ ನೀಡಿದೆ ಎಂದು ಅವರು ನ್ಯಾಯಾಲಯಕ್ಕೆ ಹಿಂದುಗಳ ಪರ ಕೃತಜ್ಞತೆ ಸಲ್ಲಿಸುವುದಾಗಿ ಪ್ರಕಟಿಸಿದರು.

ಪ್ರಮುಖ ಸಿದ್ರಾಮಯ್ಯ ಹಿರೇಮಠ ಅವರು ಪ್ರತಿಕ್ರಿಯೆಸಿ ದರ್ಗಾ ಆವರಣದಲ್ಲಿ ರಾಘವಚೈತನ್ಯ ಶಿವಲಿಂಗ ವಾತಾವರಣ ಬದಲಾವಣೆ ಆಗುತ್ತಿರುವುದು ತಡೆಹಿಡಿಯಬೇಕು. ಹಿಂದಿನಂತೆ ಜ್ಯೋತಿ ಮನೆತನದವರಿಗೆ ನಾಲ್ಕನೂರು ವರ್ಷಗಳಿಂದ ಪೂಜೆ ಮಾಡುತ್ತಾ ಬಂದಿದ್ದಾರೆ ಅವರಿಗೆ ನಿತ್ಯ ಪೂಜೆಗೆ ಅವಕಾಶ ಮಾಡಿಕೊಡಬೇಕು ಎಂದು ಒತ್ತಾಯಿಸಿದರು.

ಇನ್ನೂರ್ವ ಮುಖಂಡ ಗುರುಶಾಂತ ಟೆಂಗಳಿ ಅವರು ಆಯೋಧ್ಯ ಮಾದರಿಯಲ್ಲಿ ರಾಘವಚೈತನ್ಯ ಮಂದಿರ ನಿರ್ಮಾಣದ ಸಂಕಲ್ಪವಿದೆ ಎಂದರು.

# ಎಸ್ ಸಿಪಿ– ಟಿಎಸ್ ಪಿ ಮಾಸಿಕ ಸಭೆ:ನಿಗದಿತ ಗುರಿ ಸಾಧಿಸಿ: ಡಾ.ಔದ್ರಾಮ



**ವಿಜಯಪುರ,ಫೆ.17:** ಪ್ರಸ್ತುತ ಲಭ್ಯವಿರುವ ಇಲಾಖಾವಾರು ನಿಗದಿಪಡಿಸಿದ ಅನುದಾನವನ್ನು ಮುಂಬರುವ ಸಭೆಯೊಳಗಾಗಿ ನೂರರಷ್ಟು ಪ್ರಗತಿ ಸಾಧಿಸಿ ವರದಿ ನೀಡುವಂತೆ ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಅಧಿಕಾರಿಗಳಿಗೆ ಸೂಚಿಸಿದರು.

ಸೋಮವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ 2025-26ನೇ ಸಾಲಿನ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯ ಕೇಂದ್ರ, ರಾಜ್ಯ ಹಾಗೂ ಜಿಲ್ಲಾ ವಲಯ ಯೋಜನೆ ಕಾರ್ಯಕ್ರಮಗಳ ಇಲಾಖಾವಾರು ಜನವರಿ ಮಾಹೆಯ ಅಂತ್ಯದವರೆಗೆ ಸಾಧಿಸಿದ ಪ್ರಗತಿ ವರದಿಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಸಕ್ತ ವರ್ಷದಲ್ಲಿ ನಿಗದಿಪಡಿಸಿದ ಭೌತಿಕ ಹಾಗೂ ಆರ್ಥಿಕ ಗುರಿಗೆ ಅನುಗನುಗುಣವಾಗಿ ಸಮರ್ಪಕವಾಗಿ ಬಳಸಿ ಬಾಕಿ ಇರುವ ಯೋಜನೆಗಳನ್ನು ಪೂರ್ಣಗೊಳಿಸಬೇಕು.

ಯೋಜನಗಳಿಗೆ ನಿಗದಿಪಡಿಸಿದ ಅನುದಾನ ಬಳಸಿಕೊಂಡು ಬಾಕಿ ಉಳಿಯದಂತೆ ಹಾಗೂ ಲ್ಯಾಪ್ಸ್ ಆಗದಂತೆ ತ್ವರಿತವಾಗಿ ಕಾಮಗಾರಿಗಳನ್ನು ಕೈಗೊಂಡು ಪೂರ್ಣಗೊಳಿಸಿ ವರದಿ ನೀಡಬೇಕು ಎಂದು ಸೂಚಿಸಿದರು.

ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಜಿಲ್ಲಾ ಮಟ್ಟದ ಸಭೆಯನ್ನು ಆಯೋಜಿಸುವ ಮುನ್ನ ಸಂಬಂಧಪಟ್ಟ ಅಧಿಕಾರಿಗಳು ಪ್ರತಿ ಮಾಹೆ 15ನೇ ದಿನಾಂಕದೊಳಗಾಗಿ ಪೂರ್ಣ ಪ್ರಮಾಣದ ವರದಿಯನ್ನು ಉಪ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆಯ ಕಚೇರಿಗೆ ಮಾಹಿತಿಯನ್ನು ಒದಗಿಸಿ ಸಹಕರಿಸಬೇಕು.ಆ ವರದಿ ಆಧರಿಸಿ ಜಿಲ್ಲಾ ಮಟ್ಟದ ಸಭೆಯಲ್ಲಿ ಚರ್ಚಿಸಲು ಬಹಳ ಅನುಕೂಲವಾಗಲಿದೆ. ಇನ್ನೂ ಪೂರ್ಣ ಪ್ರಮಾಣದ ಅನುದಾನವನ್ನು ಬಳಸದೇ ಇರುವ ಇಲಾಖೆಗಳು ಮುಂದಿನ ಸಭೆಯೊಳಗಾಗಿ ಯೋಜನೆಗಳ ಪೂರ್ಣ ಪ್ರಮಾಣ ಅನುದಾನ ಬಳಸಿಕೊಂಡು ವರದಿಯನ್ನು ನೀಡುವಂತೆ ಸೂಚಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಮಹೇಶ ಪೋತದಾರ ಸ್ವಾಗತಿಸಿ, ವಂದಿಸಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಸಿ.ಬಿ. ಕುಂಬಾರ, ಉಪ ಅರಣ್ಯ ಸಂರಕ್ಷಣಾಧಿಕಾರಿ ಮಲ್ಲಿನಾಥ ಕುಸನಾಳ, ಹೆಸ್ಕಾಂನ ಅಧೀಕ್ಷಕ ಅಭಿಯಂತರರಾದ ಸಿದ್ದಪ್ಪ ಬಿಂಜಗೇರಿ, ಜಿಲ್ಲಾ ಆಯುಷ್ ಅಧಿಕಾರಿಗಳಾದ ವಿದ್ಯಾವತಿ ಅಥಣಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ರಾಜಶೇಖರ ದೈವಾಡಿ, ಕೃಷಿ ಇಲಾಖೆಯ ಸಹಾಯ ನಿರ್ದೇಶಕರಾದ ಶಿವನಗೌಡ ಪಾಟೀಲ, ಮಹಾನಗರ ಪಾಲಿಕೆ ಉಪ ಆಯುಕ್ತರಾದ ಮಹಾವೀರ ಬೋರಣ್ಣವರ, ಲೀಡ ಬ್ಯಾಂಕ್‌ನ ವ್ಯವಸ್ಥಾಪಕ ಸಿದ್ದಯ್ಯ ಸೇರಿದಂತೆ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಯುವ ಮಾರ್ಗ
www.yuvamarga.com Yuva Marga yuva_marga_

# ರಾಜ್ಯ ರಾಜಕಾರಣಕ್ಕೆ ಮರಳುವ ಚಿಂತನೆಯಿಲ್ಲ



**ಬೆಂಗಳೂರು, ಫೆ. 17–** ರಾಜ್ಯ ರಾಜಕಾರಣಕ್ಕೆ ವಾಪಸ್ಸಾಗುವ ಚಿಂತನೆ ನನಗಿಲ್ಲ. ಆದರೆ ಪಕ್ಷ ಏನು ಹೇಳುತ್ತದೋ ಅದನ್ನು ಕೇಳುತ್ತೇನೆ ಎಂದು ಕೇಂದ್ರದ ರೈಲ್ವೆ ಮತ್ತು ಜಲಶಕ್ತಿ ಸಚಿವ ವಿ.ಸೋಮಣ್ಣ ಹೇಳಿದರು.

ಬೆಂಗಳೂರಿನಲ್ಲಿಂದು ರೈಲ್ವೆ ಇಲಾಖೆಯ ಕಾರ್ಯಕ್ರಮದ ಸಂದರ್ಭದಲ್ಲಿ ತಮ್ಮ ರಾಜಕೀಯದ ಬದುಕಿನ ಬಗ್ಗೆ ಹೇಳಿಕೊಂಡ ಅವರು, ನಾನು ರಾಜ್ಯ ರಾಜಕಾರಣಕ್ಕೆ ಬರುವ ಯೋಚನೆ ಇಲ್ಲ ಎಂದರು.

ನಮ್ಮಲ್ಲಿ ವ್ಯಕ್ತಿಗಿಂತ ಪಕ್ಷ ದೊಡ್ಡದು. ನಾನು ಪಕ್ಷದ ಶಿಸ್ತಿನ ಸಿಪಾಯಿ. ಪಕ್ಷದ ವರಿಷ್ಠರು ಹೇಳಿದಂತೆ ಕೇಳುತ್ತೇನೆ. ಪಕ್ಷ ಏನು ಹೇಳತ್ತದೋ ಅದನ್ನು ಮಾಡಿಕೊಂಡು ಹೋಗುತ್ತೇನೆ ಎಂದು ಸ್ಪಷ್ಟಪಡಿಸಿದರು.

**ಬೆಂಗಳೂರಿನಲ್ಲಿ ಮೇಗಾ ಕೋಚಿಂಗ್ ಸೆಂಟರ್**–ಇದಕ್ಕೂ ಮೊದಲು ಸುದ್ಧಿಗೋಷ್ಠಿಯಲ್ಲಿ ಮಾತನಾಡಿದ ಸಚಿವ ಸೋಮಣ್ಣ ಅವರು ಬೆಂಗಳೂರಿನ ಯಲಹಂಕದಲ್ಲಿ ಸುಮಾರು 5 ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಮೇಗಾ ಕೋಚಿಂಗ್ ಕೇಂದ್ರವನ್ನು ನಿರ್ಮಿಸಲಾಗುವುದು. ಇದು ದೇಶದಲ್ಲೇ ದೊಡ್ಡ ಕೋಚಿಂಗ್ ಸೆಂಟರ್ ಆಗಲಿದೆ. ಆರಂಭದಲ್ಲಿ ದೇವನಹಳ್ಳಿಯಲ್ಲಿ ಈ ಕೇಂದ್ರವನ್ನು ಆರಂಭಿಸಲು ಪ್ರಸ್ತಾಪಿಸಲಾಗಿತ್ತು. ದೂರದ ಕಾರಣದಿಂದ ಯಲಹಂಕಗೆ ಸ್ಥಳಾಂತರ ಗೊಂಡಿದೆ ಎಂದರು.

ಬೆಂಗಳೂರಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲ್ವೆ ನಿಲ್ದಾಣವನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ಅಭಿವೃದ್ಧಿಪಡಿಸುವ ಯೋಜನೆಯ ಸಿದ್ಧವಾಗಿದೆ. ಬೆಂಗಳೂರಿನ ದಂಡು ರೈಲ್ವೆ ನಿಲ್ದಾಣದ ಆಧುನೀಕರಣ ಕಾಮಗಾರಿ ಪ್ರಗತಿಯಲ್ಲಿದೆ ಎಂದರು.

ವೈಟ್ ಫೀಲ್ಡ್‌ನಿಂದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ನಿಲ್ದಾಣದವರೆಗಿನ 4 ಪಥದ ರೈಲ್ವೆ ಮಾರ್ಗ ಶೀಘ್ರವೇ ಪೂರ್ಣಗೊಳ್ಳಲಿದೆ. ಇದರ ಜೊತೆಗೆ ತುಮಕೂರು– ಬೆಂಗಳೂರು ಪಥದ ಯೋಜನೆಗೂ ಈಗಾಗಲೇ ಯೋಜನಾ ವರದಿಯನ್ನು ಸಿದ್ಧಪಡಿಸಲಾಗಿದೆ ಎಂದು ಸಚಿವ ಸೋಮಣ್ಣ ತಿಳಿಸಿದರು.

# ಫೆ. 22 ರಂದು ಶ್ವಾನಗಳ ಪ್ರದರ್ಶನ ನಾಯಿ ಮರಿಗಳ ದತ್ತು ಪಡೆಯುವ ಕಾರ್ಯಕ್ರಮ



**ಧಾರವಾಡ, ಫೆ.17–** ಹುಬ್ಬಳ್ಳಿ–ಧಾರವಾಡ ಮಹಾನಗರ ಹಾಗೂ ಜಿಲ್ಲೆಯಲ್ಲಿ ಬೀದಿ ನಾಯಿಗಳ ನಿಯಂತ್ರಣ ಹಾಗೂ ನಿರ್ವಹಣೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಫೆಬ್ರವರಿ 22 ರಂದು ಕರ್ನಾಟಕ ಕಾಲೇಜು (ಕೆ.ಸಿ.ಡಿ) ಆವರಣದಲ್ಲಿ ಜಿಲ್ಲಾ ಮಟ್ಟದ ಶ್ವಾನಗಳ ಪ್ರದರ್ಶನ, ಪೆಟ್ ಫ್ಯಾಶನ್ ಶೋ ಹಾಗೂ ಬೀದಿ ಶ್ವಾನ (ನಾಯಿ) ಮರಿಗಳನ್ನು ದತ್ತು ಪಡೆಯುವ ಕಾರ್ಯಕ್ರಮವವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಹೇಳಿದರು.

ಅವರು ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಜಿಲ್ಲಾ ಮಟ್ಟದ ಶ್ವಾನಗಳ ಪ್ರದರ್ಶನ, ಪೆಟ್ ಫ್ಯಾಶನ್ ಶೋ ಹಾಗೂ ಬೀದಿ ಶ್ವಾನ (ನಾಯಿ) ಮರಿಗಳನ್ನು ದತ್ತು ಪಡೆಯುವ ಕಾರ್ಯಕ್ರಮದ ಪೂರ್ವಭಾವಿ ಸಭೆ ಜರುಗಿಸಿ, ಬಿತ್ತಿಪತ್ರ (ಪೊಸ್ಟರ್) ಬಿಡುಗಡೆ ಮಾಡಿ, ಮಾತನಾಡಿದರು.

ಫೆಬ್ರವರಿ 22 ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಹಾಗೂ ಕರ್ನಾಟಕ ಪಶುವೈದ್ಯಕೀಯ ಸಂಘ ಜಿಲ್ಲಾ ಘಟಕ ಹಾಗೂ ಇತರೆ ಪ್ರಾಣಿ ದಯಾ ಸಂಘ, ಹೆಚ್.ಎಸ್.ಎ. ಹಾಗೂ ಇತರೆ ಎನ್.ಜಿ.ಓ.ಗಳ ಸಹಯೋಗದಲ್ಲಿ ಜಿಲ್ಲಾ ಮಟ್ಟದ ಶ್ವಾನಗಳ ಪ್ರದರ್ಶನ, ಪೆಟ್ ಫ್ಯಾಶನ್ ಶೋ ಹಾಗೂ ಬೀದಿ ಶ್ವಾನ ಮರಿಗಳನ್ನು ದತ್ತು ಪಡೆಯುವ ಕಾರ್ಯಕ್ರಮವನ್ನು ಕರ್ನಾಟಕ ಕಾಲೇಜು (ಕೆ.ಸಿ.ಡಿ) ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಶ್ವಾನಗಳ ಮಾಲೀಕರು ಹಾಗೂ ಶ್ವಾನ ಪಾಲನೆ ಆಸಕ್ತಿ ಇರುವ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಸ್ಥಾನಿಕವಾಗಿ ಪಶುಪಾಲನೆ ಇಲಾಖೆ ಹಾಗೂ ಸ್ಥಳೀಯ ಆಡಳಿತ ಸಂಸ್ಥೆಗಳು ಪ್ರಚಾರ ಕೈಗೊಳ್ಳಬೇಕೆಂದು ಅವರು ತಿಳಿಸಿದರು.

ಜಿಲ್ಲಾಮಟ್ಟದ ಶ್ವಾನ ಪ್ರದರ್ಶನದಲ್ಲಿ ವಿವಿಧ ಆಕರ್ಷಕ ಶ್ವಾನ ತಳಿಗಳು ಭಾಗವಹಿಸಲಿದ್ದು, ತಳಿ ಹಾಗೂ ಲಿಂಗವಾರು ವರ್ಗೀಕರಿಸಿ ಉತ್ತಮ ಶ್ವಾನಗಳಿಗೆ ಆಕರ್ಷಕ ಬಹುಮಾನಗಳನ್ನು ನೀಡಲಾಗುವುದು ಎಂದು ತಿಳಿಸಿದರು

ಈ ಕಾರ್ಯಕ್ರಮದಲ್ಲಿ ಶ್ವಾನಗಳೊಂದಿಗೆ ಭಾಗವಹಿಸಲು ಇಚ್ಛಿಸುವ ಶ್ವಾನ ಮಾಲಿಕರು ಫೆಬ್ರವರಿ 20 ಸಂಜೆ 5 ಗಂಟೆಯೊಳಗೆ ತಮ್ಮ ಹೆಸರು ಮತ್ತು ಶ್ವಾನದ ವಿವರಗಳನ್ನು ನೊಂದಾಯಿಸಿಕೊಳ್ಳಬೇಕು ಹಾಗೂ ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಉಪನಿರ್ದೇಶಕರು ಹಾಗೂ ಮೊ. ಸಂ: 9845459130, 9900470554, 9449930268 ಸಂಪರ್ಕಿಸಬೇಕೆಂದು ಅವರು ತಿಳಿಸಿದರು.

ಬೀದಿ ಶ್ವಾನ ಮರಿಗಳನ್ನು ದತ್ತು ಪಡೆಯಲು ಇಚ್ಛಿಸುವವರು ಲಿಂಕ https://scan.page/75SeGI ಬಳಸಿ ನೊಂದಾಯಿಸಿಕೊಳ್ಳಲು ಮತ್ತು ಹೆಚ್ಚಿನ ಮಾಹಿತಿಗಾಗಿ ಮೊ. ಸಂ: 7022298763 ಗೆ ಸಂಪರ್ಕಿಸಬಹುದು. ದತ್ತು ಪಡೆಯಲ್ಪಡುವ ಎಲ್ಲಾ ನಾಯಿಮರಿಗಳಿಗೆ ಹುಚ್ಚು ನಾಯಿ ರೋಗದ ಮತ್ತು ಇತರೆ ಶ್ವಾನಗಳ ರೋಗಳ ವಿರುದ್ಧ ಲಸಿಕೆ ಹಾಕಿ ಕೊಡಲಾಗವುದು, ಅದರ ಜೊತೆಗೆ ಜಂತುನಾಶಕ ಔಷಧ ಹಾಗೂ ಇತರೆ ಪರಿಕರಗಳನ್ನು ನೀಡುವುದರೊಂದಿಗೆ ನಾಯಿ ಸಾಕಾಣಿಕೆಗೆ ಸಂಬಂಧಿಸಿದ ಉಪಯುಕ್ತ ಮಾಹಿತಿಯನ್ನು ಎಲ್ಲರೂಂದಿಗೆ ಹಂಚಿಕೊಳ್ಳಲಾಗುವುದು ಎಂದು ಅವರು ಹೇಳಿದರು.

ದತ್ತು ಪಡೆಯುವ ಶ್ವಾನಗಳಿಗೆ, ಒಂದು ವರ್ಷದ ಒಳಗೆ ಎಚ್‌ಡಿಎಂಸಿ, ಎಚ್‌ಡಬ್ಲ್ಯೂಸಿ ಅಥವಾ ಪಶು ಪಾಲನ ಇಲಾಖೆಯ ಸಹಕಾರದೊಂದಿಗೆ ಅತೀ ಕಡಿಮೆ ವೆಚ್ಚದಲ್ಲಿ ಸಂತಾನ ಹರಣ ಶಸ್ತ್ರಚಿಕಿತ್ಸೆ ಮಾಡಿಸಲಾಗುವುದು. ಅಧಿಕಾರಿಗಳು ಮತ್ತು ಪ್ರಾಣಿ ದಯಾ ಸಂಘದ ಪದಾಧಿಕಾರಿಗಳು ಮಾಹಿತಿ ನೀಡಿ, ಸಾರ್ವಜನಿಕರಿಗೆ ಪ್ರೋತ್ಸಾಹಿಸಬೇಕೆಂದು ಜಿಲ್ಲಾ ಪಂಚಾಯತ ಸಿಇಓ ಭುವನೇಶ ಪಾಟೀಲ ಅವರು ಸೂಚಿಸಿದರು.

ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಉಪನಿರ್ದೇಶಕ ಡಾ. ಎಸ್.ವಿ. ಸಂತಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಭೆಯಲ್ಲಿ ಮುಖ್ಯ ಪಶು ವೈದ್ಯಾಧಿಕಾರಿಗಳಾದ ಡಾ. ರಮೇಶ ಹೆಬ್ಬಳ್ಳಿ, ಡಾ. ಬಿ.ಪಿ.ಹಿರೇಮಠ, ಡಾ. ಲಿಂಗರಾಜ ಪಿ.ಎಸ್., ಹ್ಯೂಮೇನ್ ವರ್ಡ್ ಫಾರ್ ಎನಿಮಲ್ಸ್ ಸಂಸ್ಥೆಯ ರಮೇಶ ಹಾಗೂ ಇತರರು ಭಾಗವಹಿಸಿದ್ದರು.

# ನಿಗಮದ ಅಧ್ಯಕ್ಷರಿಂದ ಮೃತ ನೌಕರರ ವಾರಸುದಾರರಿಗೆ2.30 ಕೋಟಿ ರೂ.ಗಳ ಪರಿಹಾರದ ಮೊತ್ತದ ಚೆಕ್ ಹಸ್ತಾಂತರ



**ಕಲಬುರಗಿ,ಫೆ.17–**ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಸೇವೆ ಸಲ್ಲಿಸುತ್ತಿರುವಾಗಲೇ ಅಕಾಲಿಕ ನಿಧನ ಹೊಂದಿದ ನೌಕರರ ಅವಲಂಬಿತ ಕುಟುಂಬಗಳಿಗೆ ಆರ್ಥಿಕ ಭದ್ರತೆ ಒದಗಿಸುವ ನಿಟ್ಟಿನಲ್ಲಿ ಸೋಮವಾರ ನಗರದ ಕೆಕೆಆರ್‌ಟಿಸಿ ಪ್ರಧಾನ ಕಚೇರಿಯಲ್ಲಿ ಆಂತರಿಕ ಗುಂಪು ವಿಮೆ ಯೋಜನೆಯಡಿ ಸಹಾಯಧನ ಪರಿಹಾರದ ಚೆಕ್ ವಿತರಿಸಲಾಯಿತು.

ಈ ಕಾರ್ಯಕ್ರಮದಲ್ಲಿ, ನಿಗಮದ ಅಧ್ಯಕ್ಷ ಅರುಣಕುಮಾರ ಪಾಟೀಲ ಹಾಗೂ ವ್ಯವಸ್ಥಾಪಕ ನಿರ್ದೇಶಕಿ ಡಾ. ಬಿ ಸುಶೀಲ್ ಅವರು ಮೃತ ನೌಕರರ 23 ವಾರಸುದಾರರಿಗೆ (ಪ್ರತಿಯೊಬ್ಬ ವಾರಸುದಾರರಿಗೆ 10 ಲಕ್ಷ ರೂ.ರಂತೆ) ಒಟ್ಟು 2.30 ಕೋಟಿ ರೂ.ಗಳ ಪರಿಹಾರದ ಮೊತ್ತದ ಚೆಕ್‌ನ್ನು ಹಸ್ತಾಂತರಿಸಿದರು.

ಸಾರಿಗೆ ನಿಗಮದ ವ್ಯಾಪ್ತಿಯ ಕಲಬುರಗಿ ವಿಭಾಗ–1 ಹಾಗೂ ವಿಭಾಗ–2ರಲ್ಲಿ ಕಾರ್ಯನಿರ್ವಹಿಸುತ್ತಿದ್ದ ನೌಕರರ ಪೈಕಿ ಇತ್ತೀಚೆಗೆ ನಿಧನರಾದ ಚೆನ್ನಮಲ್ಲಪ್ಪ ಅವರ ಪತ್ನಿ ಶೋಭಾ, ಬಾಬು ಅವರ ಪತ್ನಿ ಶಾಂತಾಬಾಯಿ, ವೀರಭದ್ರಯ್ಯ ಅವರ ಪತ್ನಿ ತನುಜಾ, ಪ್ರದೀಪಕುಮಾರ್ ಪತ್ನಿ ಜ್ಯೋತಿ, ಶರಣು ಅವರ ಪತ್ನಿ ಶಾಂತಾಬಾಯಿ, ತಾಯಿ ಸಾವಿತ್ರಿ ಹಾಗೂ ಮಗಳು ಭಾಗ್ಯಲಕ್ಷ್ಮಿ, ಸಿದ್ದೇಶ್ವರ ಅವರ ಅಣ್ಣಂದಿರಾದ ಹಣಮಂತ, ಅಶೋಕ್ ಹಾಗೂ ತಂಗಿ ಭಾರತಿ, ಜಗನ್ನಾಥ ಅವರ ಪತ್ನಿ, ದಯಾನಂದ ಅವರ ಪತ್ನಿ ಮಹಾನಂದ, ಚಂದ್ರಕಾಂತ್ ಅವರ ಪತ್ನಿ ರಾಜೇಶ್ವರಿ, ಮಲ್ಲಪ್ಪ ಅವರ ಪತ್ನಿ ಗುರುಬಾಯಿ, ಮಹಾದೇವಪ್ಪ ಅವರ ಪತ್ನಿ ಲಲಿತಾ ಕುಮಾರಿ, ಮಾಹಾರುದ್ರಾ ಅವರ ಪತ್ನಿ ಪವಿತ್ರಭಾಯಿ, ಗೋಪಾಲ್ ಅವರ ಪತ್ನಿ ಲಕ್ಮಿ ಅವರು ಸೇರಿ ವಿಜಯಪುರ, ಕೊಪ್ಪಳ, ರಾಯಚೂರು, ಬಳ್ಳಾರಿ, ಬೀದರ್ ಹಾಗೂ ಯಾದಗಿರಿ ವಿಭಾಗಗಳ ಒಟ್ಟು 23 ನೌಕರರ ಕುಟುಂಬಸ್ಥರಿಗೆ ಪರಿಹಾರ ನೀಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅಧ್ಯಕ್ಷ ಅರುಣ್ ಪಾಟೀಲ್, ಸಂಸ್ಥೆಯ ಬೆಳವಣಿಗೆಗೆ ಶ್ರಮಿಸಿದ ನೌಕರರ ಅಗಲಿಕೆ ತುಂಬಲಾರದ ನಷ್ಟವಾಗಿದೆ. ಕುಟುಂಬ ನಡೆಸುತ್ತಿದ್ದ ಆಧಾರವನ್ನೇ ಕಳೆದುಕೊಂಡ ಕುಟುಂಬಕ್ಕೆ ಪರಿಹಾರದ ಚೆಕ್ ದೊಡ್ಡದಲ್ಲ. ಅವರ ಕುಟುಂಬದವರ ಸಂಕಷ್ಟಕ್ಕೆ ಸ್ಪಂದಿಸುವುದು ನಮ್ಮ ಜವಾಬ್ದಾರಿಯಾಗಿದ್ದು, ವಿಮಾ ಯೋಜನೆಯ ಮೂಲಕ ಆರ್ಥಿಕ ನೆರವು ನೀಡಲಾಗುತ್ತಿದೆ ಎಂದರು.

ನಿಗಮವು ಯಾವಾಗಲೂ ನೌಕರರ ಕುಟುಂಬದ ಜತೆಗೆ ನಿಲ್ಲಲಿದೆ. ನಿಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ, ಭವಿಷ್ಯ ರೂಪಿಸುವ ಕಡೆಗೆ ಗಮನ ನೀಡಿ, ಏನೇ ಸಮಸ್ಯೆ ಇದ್ದರು, ಸಹ ಸಾರಿಗೆ ನಿಗಮದ ಸಂಪರ್ಕದಲ್ಲಿ ಇರಿ, ಸಂಸ್ಥೆ ನಿಮ್ಮೊಂದಿಗೆ ಇರಲಿದೆ ಎಂದು ಭರವಸೆಯ ನೀಡಿದರು.

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಡಾ. ಬಿ. ಸುಶೀಲ ಅವರು ಮಾತನಾಡಿ, ಕರ್ತವ್ಯ ಸಲ್ಲಿಸುತ್ತಿರುವಾಗಲೇ ನಿಧನವಾದ ಕುಟುಂಬಗಳಿಗೆ ಈ ಹಿಂದೇ ಆಂತರಿಕ ಗುಂಪು ವಿಮೆ ಯೋಜನೆಯಡಿ 10 ಲಕ್ಷ ಪರಿಹಾರ ನೀಡಲಾಗುತ್ತಿತ್ತು. ಅದನ್ನು ಮರುಪರಿಶೀಲಿಸಿ, ಬೋರ್ಡ್ ಸಭೆಯಲ್ಲಿ ತೀರ್ಮಾನಿಸಿ 12.50 ಲಕ್ಷಕ್ಕೆ ಏರಿಸಲಾಗಿದೆ. ಫೆಬ್ರವರಿ 1ರಿಂದ ಈ ನಿಯಮ ಅನ್ವಯ ಆಗಲಿದೆ. ನಿಗಮದ ಆರ್ಥಿಕ ಪರಿಸ್ಥಿತಿ ನೋಡಿಕೊಂಡು ಪರಿಹಾರ ಮೊತ್ತ ನೀಡಲಾಗುತ್ತಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕೆಕೆಆರ್‌ಟಿಸಿ ಹಿರಿಯ ಅಧಿಕಾರಿಗಳಾದ ಸುನೀಲಕುಮಾರ್ ಚಂಡ್ರಕಿ, ಗಂಗಾಧರ್, ಸಂತೋಷ್ ಗೋಗೇರಿ, ಚಂದ್ರಕಾಂತ್ ಪುಲಾರೆ, ಬಸವರಾಜ್ ಬೆಳಗಾವಿ, ಜಗದೀಶ್, ಬೋರಯ್ಯ, ಮಹಿಪಾಲ್ ಬೇಗಾರ್ ಸೇರಿ ಹಿರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ತೊನಸನಹಳ್ಳಿ; ಶಿವಲಿಂಗ ಪ್ರತಿಷ್ಠಾಪನೆ, ಶಾಲಾ ವಾರ್ಷಿಕೋತ್ಸವ

**ಕಲಬುರಗಿ,ಫೆ.17–**ಶಿವರಾತ್ರಿಯ ಪವಿತ್ರ ದಿನದಂದು ಕಲಬುರ್ಗಿ ಜಿಲ್ಲೆಯ ಶಹಾಬಾದ್ ತಾಲೂಕಿನ ತೊನಸನಳ್ಳಿ ಗ್ರಾಮದಲ್ಲಿ ಶ್ರೀ ಶರಣ ಗ್ರಾಮೀಣ ಶಿಕ್ಷಣ ಸಂಸ್ಥೆಯ ಸಂಸ್ಥಾಪಕರಾದ ಕೊಟ್ಟೂರೇಶ್ವರ ಮಹಾಸ್ವಾಮಿಗಳ ಸಂಸ್ಥಾನದಲ್ಲಿ ಶಿವನ ಅಪರೂಪದ ಲಿಂಗ ಪ್ರತಿಷ್ಠಾಪನೆ ಹಾಗೂ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ತೊನಸ್ನಳ್ಳಿಯ ರೇವಣಸಿದ್ದೇಶ್ವರ ಮಹಾಸ್ವಾಮಿಗಳು ವಹಿಸಿದ್ದರು. ಜೊತೆಯಲ್ಲಿ ನದಿಸಿನ್ನೂರ ಆಶ್ರಮದ ಗುರುದೇವ ಮಹಾಸ್ವಾಮಿಗಳು ಹಾಗೂ ಶಿವನ ಪುರಾಣ ಕಾರ್ಯಕ್ರಮ ನಡೆಸಿಕೊಟ್ಟಂತ ಶಾಂತಶ್ವರ ಸ್ವಾಮೀಜಿಗಳು ಇದ್ದು ಕಾರ್ಯಕ್ರಮದ ಉದ್ಘಾಟನೆಯನ್ನು ಗ್ರಾಮೀಣ ಮತ ಕ್ಷೇತ್ರದ ಶಾಸಕರಾದಂತ ಬಸವರಾಜ ಮತ್ತಿಮೂಡ ಅವರ ಧರ್ಮ ಪತ್ನಿ ಶ್ರೀಮತಿ ಜಯಶ್ರೀ ಮತ್ತಿಮೂಡ ಅವರು ನೆರವೇರಿಸಿ ಕಾರ್ಯಕ್ರಮಕ್ಕೆ ಚಾಲನೆಯನ್ನು ನೀಡಿದರು. ಈ ಬಾರಿ ಫೆಬ್ರವರಿ 5ರಿಂದ ಪ್ರಾರಂಭಗೊಂಡಂತ ಶಿವನ ಪುರಾಣ ದಿನಾಂಕ 13 ರಂದು ಉಜ್ಜಯಿನಿಯ ಜಗದ್ಗುರುಗಳ ಆಗಮನದೊಂದಿಗೆ ಸುಮಾರು ಒಂದು ಸಾವಿರ ಹೆಣ್ಣು ಮಕ್ಕಳ ಉಡಿತುಂಬುವ ಕಾರ್ಯಕ್ರಮದ ಜೊತೆಗೆ ಮುಕ್ತಾಯಗೊಂಡಿದ್ದು 15 ರಂದು ಶಿವರಾತ್ರಿ ನಿಮಿತ್ಯ ಶಾಲಾ ವಾರ್ಷಿಕೋತ್ಸವದ ಜೊತೆಗೆ ಕಾಸಿಯ ಶಿವನ ಲಿಂಗದ ಪ್ರತಿಷ್ಠಾಪನೆಯ ಮೂಲಕ ಪವಿತ್ರ ಶಿವರಾತ್ರಿ ಮಹೋತ್ಸವದ ಕಾರ್ಯಕ್ರಮ ನೆರವೇರಿಸಲಾಯಿತು. ಅದೇ ರೀತಿಯಾಗಿ ಗ್ರಾಮೀಣ ಪ್ರತಿಭಾವಂತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕೂಡ ಈ ಸಂದರ್ಭದಲ್ಲಿ ನೀಡಲಾಯಿತು.





ಈ ಸಂದರ್ಭದಲ್ಲಿ ಜಿಲ್ಲೆಯ ಮುಖಂಡರಾದ ಬಸವರಾಜ್ ಬೂದಿಹಾಳ, ಲಿಂಗಣ್ಣ ಹುಲಗುಲ್ಕಾರ, ಸಾಬಣ್ಣ ಜಲಗಾರ ಸೇರಿದಂತೆ ಅನೇಕ ಮುಖಂಡರು, ಶಾಲೆಯ ಮಕ್ಕಳು ಹಾಗೂ ಪೊಷಕರು ಸುತ್ತಮುತ್ತನ ಗ್ರಾಮದ ಸಾವಿರಾರು ಜನರು ಉಪಸ್ಥಿತರಿದ್ದರು ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿದವು.

# ಕ್ರೀಡೆ ಎಂಬುವುದು ಕೇವಲ ಗೆಲುವು–ಸೋಲಲ್ಲ, ಅದು ಶಿಸ್ತು ಮತ್ತು ದೈಹಿಕ ಸದೃಢತೆಯ ಸಂಕೇತ



**ಕಲಬುರಗಿ,ಫೆ.17–**ಕ್ರೀಡೆ ಎಂಬುವುದು ಕೇವಲ ಗೆಲುವು–ಸೋಲಲ್ಲ, ಅದು ಶಿಸ್ತು ಮತ್ತು ದೈಹಿಕ ಸದೃಢತೆಯ ಸಂಕೇತ. ಕ್ರೀಡೆ ಎಂಬುದು ಹಬ್ಬದ ವಾತಾವರಣವಿದ್ದಂತೆ ಅದನ್ನು ಸರಿಯಾಗಿ ಸದ್ಭಳಕೆ ಮಾಡಿಕೊಂಡು ರಾಜ್ಯ ರಾಷ್ಟ್ರಮಟ್ಟದಲ್ಲಿ ಗೆಲುವು ಸಾಧಿಸಿದರೆ ಸರ್ಕಾರಿ ಕೋಟಾದಲ್ಲಿ ಮೇಸಲಾತಿ ಅನ್ವಯ ಉದ್ಯೋಗ ದೊರೆಯುತ್ತದೆ. ಇನಸ್ಟಿಟ್ಯೂಟ್ ಆಫ್ ಟ್ರೈನಿಂಗ್ ಆಫ್ ಟ್ರೈನರ್ಸ್ (ಐ.ಟಿ.ಓ.ಟಿ), ದಾವಣಗೆರೆಯ ಜಂಟಿ ನಿರ್ದೇಶಕರಾದ ರವೀಂದ್ರನಾಥ ಬಾಳ್ಳಿ ಅವರು ಹೇಳಿದರು.

ಸೋಮವಾರದಂದು ನಡೆಯುವ ನಗರದ ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ ಫೆಬ್ರವರಿ 16 ರಿಂದ 18 ರವರೆಗೆ ಆಯೋಜಿಸಿದ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ(ಪುರುಷ) ಕಲಬರುಗಿ, ನೋಡಲ್ ಅಧೀನದಲ್ಲಿ ಜಿಲ್ಲೆಯ ಸರಕಾರಿ ಮತ್ತು ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ತರಬೇತಿದಾರರ ಜಿಲ್ಲಾ ಮಟ್ಟದ ಕ್ರೀಡಾಕೂಟ ಬಲೂನ ಹಾರಿಬಿಡುವುದರ ಮೂಲಕ ಚಾಲನೆ ನೀಡಿದರು.

ಕ್ರೀಡಾಕೂಟದಲ್ಲಿ ಅಥ್ಲೇಟಿಕ್ಸ್, ಕಬ್ಬಡ್ಡಿ, ವಾಲಿಬಾಲ್, ಕ್ರಿಕ್ರೇಟ್, ಥ್ರೋ ಬಾಲ್ ಮುಂತಾದ ಕ್ರೀಡೆಗಳನ್ನು ಆಯೋಜಿಸಲಾಗಿದ್ದು ಇದರ ಸದುಪಯೋಗ ಪಡೆಯಲು ಕರೆ ನೀಡಿದರು.

ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ(ಪು), ಕಲಬುರಗಿಯ ಪ್ರಾಚಾರ್ಯರಾದ ಮುರಲಿಧರ ರತ್ನಗಿರಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, “ಆರೋಗ್ಯವೇ ಭಾಗ್ಯ” ಎಂಬ ಗಾದೆಯಂತೆ, ಮನುಷ್ಯನ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಕ್ರೀಡೆ ಅತ್ಯಗತ್ಯ. ಕೇವಲ ಪಠ್ಯಪುಸ್ತಕದ ಜ್ಞಾನದಿಂದ ಜೀವನ ಪೂರ್ಣವಾಗುವುದಿಲ್ಲ, ಮೈದಾನದಲ್ಲಿ ಆಡುವ ಆಟಗಳು ನಮಗೆ ಶಿಸ್ತು, ಸಹನೆ ಮತ್ತು ತಂಡದೊಂದಿಗೆ ಕೆಲಸ ಮಾಡುವ ಚಾಕಚಕ್ಯತೆಯನ್ನು ಕಲಿಸಿಕೊಡುತ್ತವೆ. ಎಂದು ಹೇಳಿದರು. ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ದಿನದ 24 ಗಂಟೆಯಲ್ಲಿ 1 ಗಂಟೆಯಾದರೂ ಕ್ರೀಡೆಯಲ್ಲಿ ಭಾಗವಹಿಸಿ ಆರೋಗ್ಯಕ್ಕೆ ಲಕ್ಷಕೊಡಬೇಕು. ಇಂದಿನ ಕ್ರೀಡಾಕೂಟದಲ್ಲಿ ಸುಮಾರು 11 ಸಂಸ್ಥೆಗಳು ಭಾಗವಿಸಿದ್ದು ಹಾಗೂ 600 ತರಬೇತುದಾರರು ಭಾಗವಹಿಸಿದ್ದು ನಮಗೆ ಖುಷಿ ತಂದಿದೆ ಎಂದು ಪ್ರಾಸ್ಥಾವಿಕ ನುಡಿ ಮಾತನಾಡಿದರು.

ಕಲಬುರಗಿ ಕಛೇರಿಯ ವಿಭಾಗೀಯ ಉಪ ನಿರ್ದೇಶಕರಾದ ರುಬೀನಾ ಪರ್ವಿನ ಮಾತನಾಡಿ, ನನ್ನ ಪ್ರೀತಿಯ ವಿದ್ಯಾರ್ಥಿಗಳೇ, ಕ್ರೀಡೆ ಅಂದ್ರೆ ಹರ್ಷ, ಉಲ್ಲಾಸ, ಖುಷಿ, ಕೇವಲ 3 ದಿನ ಆಟ ಆಡಿ ಮರೋದಲ್ಲ ಫಿಟನೆಸನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅದು ಜೀವನದ ಅತ್ಯಂತ ದೊಡ್ಡ ಸಾಧನೆ ಆಗಬೇಕು, ಕ್ರೀಡೆಯನ್ನು ಹಬ್ಬಗಳಂತೆ ಆಚರಿಸಬೇಕು. ಮೈದಾನಕ್ಕೆ ಇಳಿದ ಮೇಲೆ ಗೆಲ್ಲಲೇಬೇಕು ಎಂಬ ಛಲವಿರಲಿ. ಆದರೆ ನೆನಪಿಡಿ, ಗೆಲುವಿಗಿಂತಲೂ ‘ಭಾಗವಹಿಸುವಿಕೆ’ (ಕಚಿಡಿಣುಛಿರಿಚಿಣುಠಿ) ಅತಿ ದೊಡ್ಡದು. ಸೋತಾಗ ಕುಗ್ಗಬೇಡಿ, ಅದು ಮುಂದಿನ ಗೆಲುವಿನ ಪಾಠ. ಗೆದ್ದಾಗ ಬೀಗಬೇಡಿ, ಅದು ನಿಮ್ಮ ಶ್ರಮಕ್ಕೆ ಸಿಕ್ಕ ಗೌರವ ಎಂದು ಹೇಳಿದರು.ತರಬೇತಿ ಅಧಿಕಾರಿಯಾದ ಭಾರತಿ ಅವರು ಸ್ವಾಗತ ಮಾಡಿದರು. ಕಿರಿಯ ತರಬೇತಿ ಅಧಿಕಾರಿಯಾದ ವಿಜಯಕುಮಾರ ಮೇಳಕುಂದಿ ಅವರು ನಿರೂಪಣೆ ಮಾಡಿದರು.

ಕಾರ್ಯಕ್ರಮದಲ್ಲಿ ಕೆ.ಜಿ.ಟಿ.ಟಿ.ಐ ಕಲಬುರಗಿಯ ನಿರ್ದೇಶಕರಾದ ರಾಜೇಶ ಬಾವಗಿ, ಆದರ್ಶ ಶಿಕ್ಷಣ ಸಂಸ್ಥೆಯ ಸಂಯೋಜಕರಾದ ಬಸವರಾಜ ಯಲ್ದೇರಿ, ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪುರುಷರ ಕಲಬುರಗಿ ಹಾಗೂ ಸರಕಾರಿ ನೌಕರರ ಸಂಘದ ಹಿರಿಯ ಉಪಾಧ್ಯಕ್ಷರಾದ ಸುರೇಶ ವಗ್ಗೆ, ವಿ.ಇ.ಎಸ್, ಕೈ.ತ.ಸಂಸ್ಥೆ ಕಲಬುರಗಿಯ ಪ್ರಾಚಾರ್ಯರಾದ ಶಕೀಲ ಅನ್ಸಾರಿ ಮತ್ತೆ ಸಿಬ್ಬಂದಿ ವರ್ಗದವರು, ಹಾಗೂ ಸರ್ಕಾರಿ, ಅನುದಾನಿತ ಸಂಸ್ಥೆಯ ಮುಖ್ಯಸ್ಥರು, ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ತಡೆ; ಜಿಲ್ಲಾ ಮಟ್ಟದ ತರಬೇತಿ ಮಹಿಳೆಯರ, ಮಕ್ಕಳ ಸಾಗಣೆ ತಡೆಗೆ ಮುಂದಾಗಿ: ನ್ಯಾ.ಹೆಚ್.ಎ.ಸಾತ್ವಿಕ್

ಯುವಮಾರ್ಗ ಸುದ್ದಿ

**ರಾಯಚೂರು ಫೆ,17–** ಮಹಿಳೆಯರ ಮತ್ತು ಮಕ್ಕಳನ್ನು ಸಾಗಣೆ ಮಾಡುವ ಅನೈತಿಕ ಚಟುವಟಿಕೆಯನ್ನು ತೊಲಗಿಸುವ ಕಾರ್ಯಕ್ಕೆ ಸಾರ್ವಜನಿಕರು ಸಹಕರಿಸಬೇಕ. ಆಗ ಮಾತ್ರ ಅಮಾನವೀಯ ಕೃತ್ಯ ನಿಯಂತ್ರಿಸಲು ಸಾಧ್ಯ ಎಂದು ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ನ್ಯಾ.ಹೆಚ್.ಎ.ಸಾತ್ವಿಕ್ ಅವರು ಹೇಳಿದರು.





ಫೆ.17ರ ಮಂಗಳವಾರ ದಂದು ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೊದಲನೆ ಮಹಡಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ವಿವಿಧ ಭಾಗೀಧಾರ ಇಲಾಖೆಯ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವ ಕುರಿತು ಹಾಗೂ ಐಟಿಪಿಎ–1956ರ

ಕಾಯ್ದೆಯ ಬಗ್ಗೆ ಜಿಲ್ಲಾ ಮಟ್ಟದಲ್ಲಿ ಒಂದು ದಿನದ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಾನವ ಕಳ್ಳ ಸಾಗಾಣೆಯಂತಹ ದುಷ್ಕೃತ್ಯ ಸಮಾಜಕ್ಕೆ ಮಾರಕವಾಗಿದೆ. ಜತೆಗೆ ಮೂಲ ಹಕ್ಕುಗಳ ಉಲ್ಲಂಘನೆ ಕುರಿತು ಅನೇಕ ದೂರುಗಳು ದಾಖಲಾಗುತ್ತಿವೆ. ಆದ್ದರಿಂದ ಉತ್ತಮ ಸಮಾಜ ನಿರ್ಮಾಣಕ್ಕಾಗಿ ಜವಾಬ್ದಾರಿ ಅರಿತು ಸಾರ್ವಜನಿಕರು ಕರ್ತವ್ಯ ನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಇದಕ್ಕೂ ಮೊದಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರಾದ ನವೀನ್ ಕುಮಾರ್ ಅವರು ಮಾತನಾಡಿ, ಸಮಾಜದಲ್ಲಿ ನಡೆಯುವಂಥ ಕಾನೂನು ಬಾಹಿರ ಘಟನೆಗಳಿಗೆ ಮೌನವಹಿಸಿದರೆ, ಪರೋಕ್ಷವಾಗಿ ಅಪರಾಧಿಗಳಾದಂತೆ. ಆದ್ದರಿಂದ ಕಣ್ಣ ಮುಂದೆ ದುಷ್ಕೃತ್ಯಗಳು ನಡೆದಾಗ ಅದನ್ನು ತಪ್ಪಿಸಬೇಕಾದ್ದು, ಪ್ರತಿಯೊಬ್ಬರ ಕರ್ತವ್ಯವಾಗಿದೆ. ಮಹಿಳೆಯರ ಅಭಿವೃದ್ಧಿಗಾಗಿ ಸರ್ಕಾರ ಜಾರಿ ತಂದಿರುವ ಯೋಜನೆಗಳ ಸದುಪಯೋಗವಾಗುವಂತೆ ಮಾಡಿ, ಸಮಾಜದ ಬದಲಾವಣೆಗೆ ಶ್ರಮಿಸಬೇಕು ಎಂದರು.

ಪ್ರತಿಜ್ಞಾವಿಧಿ ಬೋಧನೆ: ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವ ಕುರಿತು ತರಬೇತಿ ಕಾರ್ಯಕ್ರಮದಲ್ಲಿ ಕರ್ನಾಟಕವನ್ನು ಮಾನವ ಕಳ್ಳ ಸಾಗಾಣಿಕೆಯಿಂದ ವಿಮುಕ್ತಗೊಳಿಸಲು, ಸಂಕಷ್ಟದಲ್ಲಿರುವ ಜನರನ್ನು ರಕ್ಷಿಸಲು ಹಾಗೂ ಸಾಗಾಣಿಕೆಗೆ ಒಳಪಟ್ಟವರಿಗೆ ಸೂಕ್ತ ನ್ಯಾಯ ಒದಗಿಸಲು ನನ್ನ ಸೇವೆಯನ್ನು ಮುಡುಪಾಗಿಡುತ್ತೇನೆ, ಸಂವಿಧಾನದಲ್ಲಿ ನೀಡಿರುವ ಸಮಾನತೆಯನ್ನು ಸಾಧಿಸಲು ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತೇನೆ ಎಂದು ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಎಸ್.ಜೆ.ಕುಮಾರಸ್ವಾಮಿ ಅವರು ಪ್ರತಿಜ್ಞಾವಿಧಿಯನ್ನು ಬೋಧಿಸಿದರು. ಇದೇ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಯ ಉಪ ನಿರ್ದೇಶಕರಾದ ಸಿಂಧೂ, ಕಾರ್ಮಿಕ ಇಲಾಖೆ ಅಧಿಕಾರಿ ಆರತಿ, ಜಿಲ್ಲಾ ಮಕ್ಕಳ ರಕ್ಷಣಾ ಧಿಕಾರಿ ಅಮರೇಶ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಿವಮಾನಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶರಣಮ್ಮ ಕಾರನೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಕುಮಾರ, ಅಲ್ಪಸಂಖ್ಯಾತ ರ ಕಲ್ಯಾಣ ಇಲಾಖೆಯ ತಾಲೂಕು ಅಧಿಕಾರಿ ಮೈಬೂಬ್ ಸಾಬ್ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಿನ ಶಿಶು ಅಭಿವೃದ್ಧಿ ಅಧಿಕಾರಿಗಳು, ಅಂಗನವಾಡಿ ಕಾರ್ಯಕರ್ತೆಯರು ಇದ್ದರು. ಮಹಿಳಾ ಮತ್ತು ಮಕ್ಕಳ ಇಲಾಖೆಯ ತಜ್ಞರಾದ ಗಿರಿಜವ್ವ ಅವರು ಕಾರ್ಯಕ್ರಮದ ನಿರೂಪಣೆ ಮಾಡಿದರು.

# ಯಾದಗಿರಿ ಜಿಲ್ಲಾ ಉತ್ಸವ ಯಾವಾಗ?: ಬಿರೇಶ ಚಿರತೆನೋರ ಪ್ರಶ್ನೆ

**ಯಾದಗಿರಿ :ಫೆ.17:**ಜಿಲ್ಲೆಯಾಗಿ 17 ವರ್ಷಗಳು ಕಳೆದರೂ ಸಹ ಜಿಲ್ಲೆಯಲ್ಲಿ "ಜಿಲ್ಲಾ ಉತ್ಸವ" ಕಾರ್ಯಕ್ರಮವನ್ನು ಆಯೋಜಿಸದಿರುವುದು ವಿಷಾದನೀಯ ಸಂಗತಿಯಾಗಿದೆ ಎಂದು ಬಿರೇಶ ಚಿರತೆನೋರ ಪತ್ರಿಕೆ ಹೇಳಿಕೆ ನೀಡಿರುವ ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪತ್ರಿಕೆ ಹೇಳಿಕೆ ನೀಡಿರುವ ಅವರು, ಯಾದಗಿರಿ ಜಿಲ್ಲೆ ನೆಲ, ಜಲ, ಭಾಷೆ, ಸಾಂಸ್ಕೃತಿಕ ವೈವಿಧ್ಯತೆ, ಸಾಹಿತ್ಯ ಪರಂಪರೆ, ಜಾನಪದ ಕಲೆಗಳು, ಗೀಗಿ ಪದ, ಡೊಳ್ಳಿನ ಪದ, ಶೋಭಾನ ಪದ, ಹಗಲು ವೇಷ ಸೇರಿದಂತೆ ಅನೇಕ ಜನಪದ ಕಲಾವಿದರು ಇದ್ದರೂ ಅವರಿಗೆ ಸೂಕ್ತ ಗೌರವ ಹಾಗೂ ಗುರುತಿನ ಅವಕಾಶ ದೊರೆಯುತ್ತಿಲ್ಲ ಎಂದು ದೂರಿದರು.ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ ಇವುಗಳೆಲ್ಲವೂ ಜಿಲ್ಲಾಮಟ್ಟದ ಉತ್ಸವ ಆಯೋಜನೆಗೆ ಮುಂದಾಗಬೇಕಾಗಿತ್ತು. ಆದರೆ ಇದುವರೆಗೆ ಯಾವುದೇ ಸ್ಪಷ್ಟ ಕ್ರಮ ಕೈಗೊಳ್ಳದಿರುವುದು ಖೇದಕರವಾಗಿದೆ ಎಂದು ಅವರು ಹೇಳಿದರು.

ರಾಜ್ಯ ಸರ್ಕಾರ ಈಗಾಗಲೇ ಪ್ರತಿ ಜಿಲ್ಲೆಯಲ್ಲಿ ಜಿಲ್ಲಾ ಉತ್ಸವಗಳನ್ನು ಆಚರಿಸುತ್ತಿದ್ದು, ಇತರೆ ಜಿಲ್ಲೆಗಳ ಮಾದರಿಯಲ್ಲಿ ಯಾದಗಿರಿಯಲ್ಲೂ ಉತ್ಸವ ನಡೆಯಬೇಕು ಎಂಬುದು ಜಿಲ್ಲೆಯ ಜನರ ಬಹುಕಾಲದ ಬೇಡಿಕೆಯಾಗಿದೆ. ಆದರೂ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ಹಾಗೂ ಸಂಬಂಧಿತ ಅಧಿಕಾರಿಗಳ ನಿರ್ಲಕ್ಷ್ಯ



ಧೋರಣೆಯಿಂದ ಕಾರ್ಯಕ್ರಮ ನೆನೆಗುದಿಗೆ ಬಿದ್ದಿದೆ ಎಂದು ಟೀಕಿಸಿದರು.

ಜಿಲ್ಲೆಯ ಕಲಾವಿದರು, ಸಾಹಿತ್ಯಿಕರು, ಜಾನಪದ ಕಲಾ ತಂಡಗಳು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ವೇದಿಕೆಗಾಗಿ ಕಾಯುತ್ತಿದ್ದಾರೆ. ಹೀಗಾಗಿ ತಕ್ಷಣವೇ ಜಿಲ್ಲಾ ಉತ್ಸವ ಆಯೋಜನೆಗೆ ಸರ್ಕಾರ ಕ್ರಮವಹಿಸಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣದ ಜಿಲ್ಲಾ ಅಧ್ಯಕ್ಷರಾಗಿರುವ ಬಿರೇಶ ಚಿರತೆನೋರ ಆಗ್ರಹಿಸಿದ್ದಾರೆ.

ಜಿಲ್ಲಾ ಉತ್ಸವ ಕೇವಲ ಸಾಂಸ್ಕೃತಿಕ ಕಾರ್ಯಕ್ರಮವಲ್ಲ, ಜಿಲ್ಲೆಯ ಅಸ್ತಿತ್ವ, ಪರಂಪರೆ ಹಾಗೂ ಕಲೆಗಳ ಸಂರಕ್ಷಣೆಗೆ ಅಗತ್ಯವಾದ ಮಹತ್ವದ ವೇದಿಕೆಯಾಗಿದ್ದು, ಸಂಬಂಧಿತ ಅಧಿಕಾರಿಗಳು ತಕ್ಷಣ ಗಮನಹರಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

# ಎಸ್ ಸಿಪಿ– ಟಿಎಸ್ ಪಿ ಮಾಸಿಕ ಸಭೆ:ನಿಗದಿತ ಗುರಿ ಸಾಧಿಸಿ: ಡಾ.ಔದ್ರಾಮ



**ವಿಜಯಪುರ,ಫೆ.17:** ಪ್ರಸ್ತುತ ಲಭ್ಯವಿರುವ ಇಲಾಖಾವಾರು ನಿಗದಿಪಡಿಸಿದ ಅನುದಾನವನ್ನು ಮುಂಬರುವ ಸಭೆಯೊಳಗಾಗಿ ನೂರರಷ್ಟು ಪ್ರಗತಿ ಸಾಧಿಸಿ ವರದಿ ನೀಡುವಂತೆ ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಅಧಿಕಾರಿಗಳಿಗೆ ಸೂಚಿಸಿದರು.

ಸೋಮವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ 2025–26ನೇ ಸಾಲಿನ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯ ಕೇಂದ್ರ, ರಾಜ್ಯ ಹಾಗೂ ಜಿಲ್ಲಾ ವಲಯ ಯೋಜನೆ ಕಾರ್ಯಕ್ರಮಗಳ ಇಲಾಖಾವಾರು ಜನವರಿ ಮಾಹೆಯ ಅಂತ್ಯದವರೆಗೆ ಸಾಧಿಸಿದ ಪ್ರಗತಿ ವರದಿಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಸಕ್ತ ವರ್ಷದಲ್ಲಿ ನಿಗದಿಪಡಿಸಿದ ಭೌತಿಕ ಹಾಗೂ ಆರ್ಥಿಕ ಗುರಿಗೆ ಅನುಗನುಗುಣವಾಗಿ ಸಮರ್ಪಕವಾಗಿ ಬಳಸಿ ಬಾಕಿ ಇರುವ ಯೋಜನೆಗಳನ್ನು ಪೂರ್ಣಗೊಳಿಸಬೇಕು.

ಯೋಜನಗಳಿಗೆ ನಿಗದಿಪಡಿಸಿದ ಅನುದಾನ ಬಳಸಿಕೊಂಡು ಬಾಕಿ ಉಳಿಯದಂತೆ ಹಾಗೂ ಲ್ಯಾಪ್ಸ್ ಆಗದಂತೆ ತ್ವರಿತವಾಗಿ ಕಾಮಗಾರಿಗಳನ್ನು ಕೈಗೊಂಡು ಪೂರ್ಣಗೊಳಿಸಿ ವರದಿ ನೀಡಬೇಕು ಎಂದು ಸೂಚಿಸಿದರು.

ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಜಿಲ್ಲಾ ಮಟ್ಟದ ಸಭೆಯನ್ನು ಆಯೋಜಿಸುವ ಮುನ್ನ ಸಂಬಂಧಪಟ್ಟ ಅಧಿಕಾರಿಗಳು ಪ್ರತಿ ಮಾಹೆ 15ನೇ ದಿನಾಂಕದೊಳಗಾಗಿ ಪೂರ್ಣ ಪ್ರಮಾಣದ ವರದಿಯನ್ನು ಉಪ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆಯ ಕಚೇರಿಗೆ ಮಾಹಿತಿಯನ್ನು ಒದಗಿಸಿ ಸಹಕರಿಸಬೇಕು.ಆ ವರದಿ ಆಧರಿಸಿ ಜಿಲ್ಲಾ ಮಟ್ಟದ ಸಭೆಯಲ್ಲಿ ಚರ್ಚಿಸಲು ಬಹಳ ಅನುಕೂಲವಾಗಲಿದೆ. ಇನ್ನೂ ಪೂರ್ಣ ಪ್ರಮಾಣದ ಅನುದಾನವನ್ನು ಬಳಸದೇ ಇರುವ ಇಲಾಖೆಗಳು ಮುಂದಿನ ಸಭೆಯೊಳಗಾಗಿ ಯೋಜನೆಗಳ ಪೂರ್ಣ ಪ್ರಮಾಣ ಅನುದಾನ ಬಳಸಿಕೊಂಡು ವರದಿಯನ್ನು ನೀಡುವಂತೆ ಸೂಚಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಮಹೇಶ ಪೋತದಾರ ಸ್ವಾಗತಿಸಿ, ವಂದಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಸಿ.ಬಿ. ಕುಂಬಾರ, ಉಪ ಅರಣ್ಯ ಸಂರಕ್ಷಣಾಧಿಕಾರಿ ಮಲ್ಲಿನಾಥ ಕುಸನಾಳ, ಹೆಸ್ಕಾಂನ ಅಧೀಕ್ಷಕ ಅಭಿಯಂತರರಾದ ಸಿದ್ದಪ್ಪ ಬಿಂಜಗೇರಿ, ಜಿಲ್ಲಾ ಆಯುಷ್ ಅಧಿಕಾರಿಗಳಾದ ವಿದ್ಯಾವತಿ ಅಥಣಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ರಾಜಶೇಖರ ದೈವಾಡಿ, ಕೃಷಿ ಇಲಾಖೆಯ ಸಹಾಯ ನಿರ್ದೇಶಕರಾದ ಶಿವನಗೌಡ ಪಾಟೀಲ, ಮಹಾನಗರ ಪಾಲಿಕೆ ಉಪ ಆಯುಕ್ತರಾದ ಮಹಾವೀರ ಬೋರಣ್ಣವರ, ಲೀಡ ಬ್ಯಾಂಕ್‌ನ ವ್ಯವಸ್ಥಾಪಕ ಸಿದ್ದಯ್ಯ ಸೇರಿದಂತೆ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# 11 ನೇ ತಾಲೂಕು ಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನ ನೀರಮಾನ್ವಿ ಗ್ರಾಮದಲ್ಲಿ ಜರಗುವುದು : ಶರಣಬಸವ ನೀರಮಾನ್ವಿ



ಯುವಮಾರ್ಗ ಸುದ್ದಿ

**ಮಾನ್ವಿ,ಫೆ.17–** ಈ ಬಾರಿ ಕನ್ನಡ ಸಾಹಿತ್ಯ ಸಮ್ಮೀಳನವನ್ನು ಗ್ರಾಮೀಣ ಭಾಗದಲ್ಲಿ ಹಮ್ಮಿಕೊಳ್ಳುವ ಉದ್ದೇಶದಿಂದ ಫೆ.28 ರಂದು ತಾಲೂಕಿನ ನೀರಮಾನ್ವಿ ಗ್ರಾಮದ ಶ್ರೀ ಸಿದ್ದಾರೂಡರ ಮಠದಲ್ಲಿ 11 ನೇ ತಾಲೂಕು ಮಟ್ಟದ ಕನ್ನಡ ಸಾಹಿತ್ಯ ಸಮ್ಮೆಳನವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಾ.ಕಸಾಪ.ಅಧ್ಯಕ್ಷರಾದ ಶರಣಬಸವ ನೀರಮಾನ್ವಿ ತಿಳಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಮಾತನಾಡಿ 11 ನೇ ತಾಲೂಕು ಮಟ್ಟದ ಕನ್ನಡ ಸಾಹಿತ್ಯ ಸಮ್ಮೆಳನದ ಅಧ್ಯಕ್ಷರನ್ನಾಗಿ ಹಿರಿಯ ಸಾಹಿತಿ ಡಾ.ಬಸವಪ್ರಭು ಪಾಟೀಲ್ ಬೆಟ್ಟದೂರು ರವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ. ಫೆ.28 ರಂದು ಬೆಳಿಗ್ಗೆ 10 ಕ್ಕೆ ನೀರಮಾನ್ವಿ ಗ್ರಾಮದ ಶ್ರೀ ರೇಣುಕಾ ದೇವಿ ಯಲ್ಲಮ್ಮ ದೇವಸ್ಥಾನದ ಆವರಣದಲ್ಲಿ ತಹಶೀಲ್ದಾರ್ ಭೀಮರಾಯ .ಬಿ. ರಾಮಸಮುದ್ರ ರವರು ನಾಡದೇವಿ ಭುವನೇಶ್ವರಿ ಭಾವಚಿತ್ರ ಹಾಗೂ 11 ನೇ ಸಮೇಳನಾಧ್ಯಕ್ಷರು ಮೆರವಣಿಗೆಗೆ ಚಾಲನೆ ನೀಡಲಿದ್ದಾರೆ ಶ್ರೀ ಸಿದ್ದಾರೂಡರ ಮಠದ ವೇದಿಕೆಯವರೆಗೆ ನಡೆಯುವ ಮೆರವಣಿಗೆಯಲ್ಲಿ ವಿವಿಧ ಕಲಾ ತಂಡಗಳು ಭಾಗವಹಿಸಲಿವೆ.

ವೇದಿಕೆಯ ಕಾರ್ಯಕ್ರಮವನ್ನು ಹಿರಿಯ ಸಾಹಿತಿ ಶಹಪುರ ಸಿದ್ದಾರಮ ಹೊನ್ಕಲ್ ಉದ್ಘಾಟಿಸಲಿದ್ದಾರೆ. 11 ನೇ ಕನ್ನಡ ಸಾಹಿತ್ಯ ಸಮ್ಮೇಳನದ ವೇದಿಕೆಯಲ್ಲಿ ರೈತರ ಕುರಿತು ಹಾಗೂ ಕವಿಗೋಷ್ಠಿ, ತಾಲೂಕಿನ ಶಿಲಾಶಾಸನಗಳ ಕುರಿತು, ತಾಲೂಕಿನ ದಲಿತಪರ ಹೋರಾಟಗಳ ಕುರಿತು , 11 ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾದ ಹಿರಿಯ ಸಾಹಿತಿ ಡಾ.ಬಸವಪ್ರಭು ಪಾಟೀಲ್ ಬೆಟ್ಟದೂರು ರವರ ಜೀವನ ಮತ್ತು ಸಾಧನೆ ಕುರಿತು ಗೋಷ್ಠಿ , ಗಡಿನಾಡ ಕನ್ನಡ ಶಾಲೆಗಳ ಸ್ಥಿತಿಗತಿ ಕುರಿತು ಸೇರಿದಂತೆ ಒಟ್ಟು 6 ಗೋಷ್ಠಿಗಳನ್ನು ಹಮ್ಮಿಕೊಳ್ಳಲಾಗಿದೆ.

ನಂತರ ಸಮ್ಮೇಳನಾಧ್ಯಕ್ಷರ ನುಡಿಗಳು ಸೇರಿದಂತೆ ತಾಲೂಕಿನ ವಿವಿಧ ಸಾಧಕರನ್ನು ಸನ್ಮಾನಿಸಿ ಗೌರವಿಸುವುದು ಸೇರಿದಂತೆ ವಿವಿಧ ಕನ್ನಡ ಪರ ಕಾರ್ಯಕ್ರಮಗಳು , ನಿರ್ಣಯಗಳು ಸೇರಿದಂತೆ ಇನ್ನಿತರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಕ.ಸಾ,ಪ , ಗೌರವ ಕಾರ್ಯದರ್ಶಿ ತಾಯಪ್ಪ ಬಿ.ಹೊಸೂರು ಮಾತನಾಡಿ ಜಿಲ್ಲಾ ಕಸಾಪ ಅಧ್ಯಕ್ಷರಾದ ರಂಗಪ್ಪ ಅಳ್ಳುಂಡಿ ಯವರಿಂದ ಆಶಯನುಡಿಗಳನ್ನು ಆಡಲಿದ್ದಾರೆ 11 ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸ್ವಾಗತ ಸಮಿತಿಯ ಗೌರವಾಧ್ಯಕ್ಷರಾಗಿರುವ ರಾಜ್ಯ ಸಚಿವರಾದ ಎನ್.ಎಸ್. ಬೋಸರಾಜು, ಅಧ್ಯಕ್ಷರಾಗಿರುವ ಶಾಸಕ ಹಂಪಯ್ಯನಾಯಕ ಸೇರಿದಂತೆ ಸಂಸದರು, ಶಾಸಕರು, ಮಾಜಿ ಶಾಸಕರು. ವಿಧಾನ ಪರಿಷತ್ ಸದಸ್ಯರು, ಜನಪ್ರತಿನಿಧಿಗಳು ಸೇರಿದಂತೆ ಕಸಾಪ ಅಜೀವ ಸದಸ್ಯರು ಕನ್ನಡಪರ ಸಂಘಟನೆಗಳವರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಜನಪರ ಸಂಘಟನೆಯ ರಾಜ್ಯಧ್ಯಕ್ಷರಾದ ಶ್ರೀಕಾಂತ ಗೂಳಿ, ಪೋತ್ನಾಳ ಹೋಬಳಿ ಘಟಕದ ಕಸಾಪ ಅಧ್ಯಕ್ಷರಾದ ಹನುಮಂತಪ್ಪ ಕೊಟ್ನೆಕಲ್. ಹೆಚ್.ಶರ್ಪುದ್ದೀನ್ ಪೋತ್ನಾಳ್, ಲಕ್ಷ್ಮಣ ಜಾನೇಕಲ್, ರಾಮು ಹೊಳೆಯಪ್ಪ, ಬಾಲಜಿಸಿಂಗ್ ಇದ್ದರು.

# ಸೈದಾಪುರ:ಅದ್ಧೂರಿ ಸೇವಾಲಾಲ್ ಜಯಂತಿ ಆಚರಣೆ ಇಂದು

**ಸೈದಾಪುರ:ಫೆ.17:** ಬಂಜಾರ ಸಮುದಾಯದ ಆರಾಧ್ಯದೈವ ಸಂತ ಸೇವಾಲಾಲ್‌ರ 287ನೇ ಜಯಂತ್ಯೋತ್ಸವವನ್ನು ಫೆ–18 ಬುಧವಾರದಂದು ಅದ್ಧೂರಿಯಾಗಿ ಆಚರಿಸಲಾಗುತ್ತಿದೆ ಎಂದು ಬಂಜಾರ ಸಮುದಾಯದ ಯುವ ಮುಖಂಡ ಅರ್ಜುನ ಚವ್ಹಾಣ ತಿಳಿಸಿದರು.

ಪಟ್ಟಣದಲ್ಲಿ ಸಂತ ಸೇವಲಾಲ್ ಜಯಂತಿ ಅಂಗವಾಗಿ ಪತ್ರಿಕಾಗೋಷ್ಠಿ ನಡೆಸಿ ಆಮಂತ್ರಣ ಪತ್ರಿಕೆಗಳನ್ನು ಬಿಡುಗಡೆ ಮಾಡಿ ಮಾತನಾಡಿದರು.

ಫೆ–18 ಬುಧವಾರ ಬೆಳಿಗ್ಗೆ 11 ಗಂಟೆಗೆ ಸೈದಾಪುರ ರೈಲು ನಿಲ್ದಾಣದಿಂದ ಬಸವೇಶ್ವರ ವೃತ್ತದ ಮಾರ್ಗವಾಗಿ ಲಕ್ಮೀ ನಗರದವರೆಗೆ ಸೇವಾಲಾಲ್ ಮಾಹರಾಜರ ಪ್ರತಿಮೆಯ ಭವ್ಯ ಮೆರವಣಿಗೆ ಹಾಗೂ ಶೋಭಯಾತ್ರೆಯನ್ನು ಹಮ್ಮಿಕೊಳ್ಳಲಾಗುವುದು. ನಂತರ ಆಸ್ಪಲ್ಲಿ ಲೇಔಟ್‌ನಲ್ಲಿ ನಡೆಯುವ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಸೈದಾಪುರ ಸಿದ್ಧಾರೂಢ ಮಠದ ಸೋಮೇಶ್ವರನಂದ ಸ್ವಾಮಿ, ಉದ್ಘಾಟಕರಾಗಿ ಗುರುಮಠ´ಕಲ್ ಶಾಸಕ ಶರಣಗೌಡ ಕಂದಕೂರ, ಹಾಗೂ ಗ್ರಾಮದ ಹಿರಿಯ ಮುಖಂಡರು ಸೇರಿದಂತೆ ಇತರರು ಪಾಲ್ಗೊಳ್ಳುವರು. ಆದ್ದರಿಂದ ಸೈದಾಪುರ ಸುತ್ತಮುತ್ತಲಿನ ಗ್ರಾಮಗಳಲ್ಲಿನ ಹಾಗೂ ತಾಂಡಗಳಲ್ಲಿನ ಬಂಜಾರ ಸಮುದಾಯದ ಜನರು ಹಾಗೂ ಗ್ರಾಮದ ಹಿರಿಯರು, ಮುಖಂಡರು, ನಾಯಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯ ಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.



ಈ ಸಂದರ್ಭದಲ್ಲಿ ಜೈ ಸೇವಾಲಾಲ್ ಸೇವಾ ಸಂಘದ ಅಧ್ಯಕ್ಷ ಭೀಮು ಚವ್ಹಾಣ, ಧರ್ಮರಾಜ ರಾಠೋಡ, ಉಪಾಧ್ಯಕ್ಷ ಕುಂದನ ಕುಮಾರ ಚವ್ಹಾಣ, ಕಾರ್ಯದರ್ಶಿ ಅಂಬ್ರೇಶ ರಾಠೋಡ, ಗೋವಿಂದ ಚವ್ಹಾಣ, ವಿಶ್ವನಾಥ ಚವ್ಹಾಣ, ಸಂತೋಷ ಚವ್ಹಾಣ, ಬಾಲಾಜಿ ಚವ್ಹಾಣ ಸೇರಿದಂತೆ ಇತರರಿದ್ದರು.

# ಲಾರಿ– ಬೈಕ್ ಡಿಕ್ಕಿ: ಮಹಿಳೆ ಸಾವು

**ವಿಜಯಪುರ, ಫೆ. 17:**ಜಿಲ್ಲೆಯ ಬಬಲೇಶ್ವರ ತಾಲೂಕಿನ ಸಾರವಾಡ ಗ್ರಾಮದ ಸಂಗಾಪುರ ಕ್ರಾಸ್ ಬಳಿ ಸೋಮವಾರ ಮಧ್ಯಾಹ್ನ ಲಾರಿ ಹಾಗೂ ಬೈಕ್ ನಡುವೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ಮಹಿಳೆಯೊಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದಾಳೆ.




ಅಡವಿ ಸಂಗಾಪುರ ಗ್ರಾಮದ ನಿವಾಸಿ ಬಾಳವ್ವ ದಳವಾಯಿ (50) ಮೃತಪಟ್ಟಿದ್ದಾಳೆ.

ಬಾಳವ್ವ ಅವರು ತಮ್ಮ ಸಂಬಂಧಿಕರೊಂದಿಗೆ ಬೈಕ್‌ನಲ್ಲಿ ತೆರಳುತ್ತಿದ್ದಾಗ ಈ ಅಪಘಾತ ಸಂಭವಿಸಿದೆ.

ವೇಗವಾಗಿ ಬಂದ ಲಾರಿ ಡಿಕ್ಕಿ ಹೊಡೆದಿದ್ದು, ಆಗ ತೀವ್ರವಾಗಿ ಗಾಯಗೊಂಡ ಮಹಿಳೆ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಬೈಕ್ ಸವಾರನಿಗೂ ಗಂಭೀರ ಸ್ವರೂಪದ ಗಾಯಗಳಾಗಿದ್ದು ತಕ್ಷಣವೇ ಅವರನ್ನು ಜಿಲ್ಲಾ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಅವರ ಸ್ಥಿತಿ ಚಿಂತಾಜನಕವಾಗಿದೆ ಎಂದು ಗೊತ್ತಾಗಿದೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H